ದಾವಣಗೆರೆ,
ಬೆಂಗಳೂರು,
ಕೋಲಾರ,
ಹಾಸನ,
ಚಿತ್ರದುರ್ಗ,
ವಿಜಯನಗರ,
ಬಳ್ಳಾರಿ,
ರಾಯಚೂರು,
ವಿಜಯಪುರ,
ಕಲಬುರ್ಗಿ

ಸಂಪಾದಕರು: ಎಸ್.ಕೆ.ಒಡೆಯರ್ ಸ್ವಾಭಿಮಾನಿಗಳ ಪತ್ರಿಕೆ www.pavitrapraja.com

ಪವಿತ್ರ ಪ್ರಜಾ

RNI:KARKAN 2007/22780 DAVANAGERE

ಕನ್ನಡ ದಿನಪತ್ರಿಕೆ

PAVITRAPRAJA KANNADA DAILY PAPER

ಉಪ ಸಂಪಾದಕರು: ಸುಚಿತ್ರ ಎಸ್.ಒಡೆಯರ್, MBA

ಸಂಪುಟ:17
VALUME:17
ಸಂಚಿಕೆ:209
ISSUE:209
ದಿನಾಂಕ:26-06-2023
Date: 26-06-2023
ಸೋಮವಾರ.MONDAY
ಪುಟ:4 Page:4
ರೂ:2-00 Rs:2-00

Editor: S.K.Wadeyar E-mail: pavitrapraja@gmail.com KA/SK/CTA-806/2021-23 Cell: 9141920642 Sub-Editor: Supritha Wadeyar

ಮೋದಿ ಜನಪ್ರಿಯತೆ ಮಂಕಾಗಿದೆ

ಕರ್ನಾಟಕದಲ್ಲಿ ಮೋದಿ ವರ್ಚಸ್ಸು ನಂಬಿದ್ದ ಬಿಜೆಪಿ ಧೂಳಿಪಟ ಆಯ್ತು: ಸಿಎಂ

ಚಿಕ್ಕೋಡಿ: ಕರ್ನಾಟಕ ರಾಜ್ಯ ಸಾರ್ವತ್ರಿಕ ಚುನಾವಣೆಯಲ್ಲಿ ರಾಜ್ಯದ ಜನರಿಗೆ ಐದು ಭರವಸೆಗಳನ್ನು ನೀಡಿದ್ದೇವೆ. ಅದರಲ್ಲಿ ಅನ್ನಭಾಗ್ಯ ಯೋಜನೆಯಡಿ ಬಡವರಿಗೆ 10 ಕೆಜಿ ಅಕ್ಕಿಯನ್ನು ನೀಡಲು ನಾವು ಘೋಷಣೆ ಮಾಡಿದ್ದೀವಿ. ಆದರೆ ಕೇಂದ್ರ ಸರ್ಕಾರ ಅಕ್ಕಿಯನ್ನು ನೀಡುತ್ತಿಲ್ಲ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿ ಕೇಳಿದರೆ ಅಕ್ಕಿ ಕೊಡುವುದಕ್ಕೆ ಆಗುವುದಿಲ್ಲ ಎಂದು ಹೇಳುತ್ತಿದ್ದಾರೆ ಎಂದು ಸಿಎಂ ಸಿದ್ದರಾಮಯ್ಯ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.ಮುಂದಿನ ಸಾರ್ವತ್ರಿಕ ಲೋಕ ಸಭಾ ಚುನಾವಣೆ ಹಿನ್ನೆಲೆ ಮಹಾರಾಷ್ಟ್ರದ ಸಾಂಗ್ಲಿ ನಗರದಲ್ಲಿ ನಡೆದ ಕಾಂಗ್ರೆಸ್ ಸಮಾವೇಶದಲ್ಲಿ ಅವರು ಮಾತನಾಡಿದರು. ಕೇಂದ್ರ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ಆಕ್ರೋಶ ಹೊರಹಾಕಿದರು. ಕಾಂಗ್ರೆಸ್ ಸರ್ಕಾದಿಂದ ದೇಶ ಅಭಿವೃದ್ಧಿ ಹೊಂದಲು ಸಾಧ್ಯ. ಕರ್ನಾಟದಲ್ಲಿ 12ನೇ ಶತಮಾನದಲ್ಲಿ ಬಸವಣ್ಣನವರು ಕ್ರಾಂತಿಕಾರಿ ಬದಲಾವಣೆ ಮಾಡಿದರು. ಇಲ್ಲಿ ಕೂಡ ಸಾವಿತ್ರಿಬಾಯಿ ಫುಲೆ, ಶಾಹು ಮಹಾರಾಜರು, ಅಂಬೇಡ್ಕರ್, ಹಲವು ಬದಲಾವಣೆ ತಂದು ಸಾಮಾಜಿಕ ಕ್ರಾಂತಿ ಮಾಡಿದರು. ಒಂದು ವೇಳೆ ಬಾಬಾ ಸಾಹೇಬ್ ಅಂಬೇಡ್ಕರ್ ಸಂವಿಧಾನ ರಚನೆ ಮಾಡದಿದ್ದರೆ ನಾನು ಇಲ್ಲಿ ಬರುತ್ತಿರಲಿಲ್ಲ, ನಾನು ಸಿಎಂ ಆಗುತ್ತಿರಲಿಲ್ಲ, ಅಂಬೇಡ್ಕರ್ ಸಂವಿಧಾನ ಕೊಡುಗೆಯಿಂದ ಬಡವರು ದೀನ ದಲಿತರು ಆರ್ಥಿಕವಾಗಿ ಬೆಳೆಯಲು ಕಾರಣವಾಗಿದೆ. ಸಮಾನತೆ ತತ್ವದಡಿ ಸಮಾಜ ಬೆಳೆಯುವುದಕ್ಕೆ ಸಂವಿಧಾನ ಕಾರಣವಾಗಿದೆ. ನಮ್ಮ ಸಂವಿಧಾನ ಸಮಾನತೆಯನ್ನು ನೋಡಿಕೊಳ್ಳುತ್ತದೆ ಎಂಬ ಕಾರಣಕ್ಕೆ ಬಿಜೆಪಿಯವರು ಸಂವಿಧಾನ ವಿರೋಧ ಮಾಡುತ್ತಾ ಬಂದಿದೆ. ಸಾವರ್ಕರ್ ಸಂವಿಧಾನ ವಿರೋಧ ಮಾಡಿದರು. ಈಗಲೂ ಬಿಜೆಪಿಯವರು ಸಂವಿಧಾನ ವಿರೋಧ ಮಾಡುತ್ತಿದ್ದಾರೆ ಎಂದು ಸಿದ್ದರಾಮಯ್ಯ ಆರೋಪಿಸಿದರು. ಕಾಂಗ್ರೆಸ್ ನವರು ಸಂವಿಧಾನ ಉಳಿವಿ ಗಾಗಿ ಶಪಥ ಮಾಡಬೇಕು, ಸಂವಿಧಾನ ಉಳಿದರೆ ನಾವು ಉಳಿಯು ವುದಕ್ಕೆ ಸಾಧ್ಯ. ಸಂವಿಧಾನ ಒಂದು ವೇಳೆ ಬದಲಾವಣೆ ಆದರೆ ನಾವು ಯಾರೂ ಉಳಿಯುವುದಿಲ್ಲ. ನಮ್ಮ ಸಂವಿಧಾನ ಉಳಿವಿಗಾಗಿ ಯಾವುದೇ ತ್ಯಾಗಕ್ಕೂ ಸಿದ್ಧತೆ ಆಗಬೇಕು. ಬಿಜೆಪಿಯವರು ಧರ್ಮ ಧರ್ಮದ ನಡುವೆ ಕೋಮುವಾದ ಜಗಳ ಹಚ್ಚಿದ್ದಾರೆ, ಇದರಿಂದ ಜಾಗೃತಿ ವಹಿಸಬೇಕಾಗಿದೆ. ಸಂಘ ಪರಿವಾರ ದವರು ಜನರ ನಡುವೆ ಧರ್ಮ ಧರ್ಮದ ನಡುವೆ ಅಶಾಂತಿ ಮೂಡಿಸಿದ್ದಾರೆ ಎಂದು ಸಿದ್ದರಾಮಯ್ಯ ದೂರಿದರು.

ದೇಶದಲ್ಲಿ ಹಲವು ರಾಜ್ಯ ಹಾಗೂ ಮಹಾರಾಷ್ಟ್ರದಲ್ಲಿ ಬಿಜೆಪಿ ಅಧಿಕಾರದಲ್ಲಿದೆ. ಅವರನ್ನು ಕಿತ್ತೊಗೆಯಬೇಕು. ಕರ್ನಾಟಕದಲ್ಲಿ ಚುನಾವಣೆ ನಡೆದಾಗ ಜನರು ಬಿಜೆಪಿಯನ್ನು ಹೀನಾಯವಾಗಿ ಸೋಲಿಸಿ ಬಿಜೆಪಿ ಕಿತ್ತು ಹಾಕಿದರು. ಈ ಬಾರಿ ಕರ್ನಾಟಕದಲ್ಲಿ ಕಾಂಗ್ರೆಸ್‌ನ 135 ಶಾಸಕರನ್ನು ಜನರು ಗೆಲ್ಲಿಸಿದ್ದಾರೆ. ಕರ್ನಾಟದಲ್ಲಿ ಯಾವತ್ತೂ ಬಿಜೆಪಿ ಜನರ ಆಶೀರ್ವಾದಿಂದ ಅಧಿಕಾರಕ್ಕೆ ಬಂದಿಲ್ಲ, ಆಪರೇಷನ್ ಕಮಲ ಮಾಡುವ ಮೂಲಕ ಅವರು ಅಧಿಕಾರಕ್ಕೆ ಬಂದಿದ್ದಾರೆ ಎಂದು ವಾಗ್ದಾಳಿ ನಡೆಸಿದರು.ಕೋಟ್ಯಂತರ ರೂಪಾಯಿ ಶಾಸಕರಿಗೆ ನೀಡಿ ಖರೀದಿ ಮಾಡಿ ಅಧಿಕಾರಕ್ಕೆ ಬಂದಿದ್ದಾರೆ. ಬಿಜೆಪಿ ಅಂದ್ರೆ ಭ್ರಷ್ಟಾಚಾರ, ಕರ್ನಾಟಕದಲ್ಲಿ ಗುತ್ತಿಗೆದಾರ ಸಂಘ 40% ಸರ್ಕಾರ ಎಂದು ಕರೆದಾಗ, ವಿರೋಧ ಪಕ್ಷದ ನಾಯಕನಾಗಿದ್ದೆನು. ಆದರೆ ನಾನು ಆ ರೀತಿ ಕರೆಯಲಿಲ್ಲ, ಅದನ್ನು ಗುತ್ತಿಗೆದಾರ ಸಂಘ ಆ ರೀತಿ ಹೇಳಿದೆ. ಮಹಾರಾಷ್ಟ್ರ ಸಿಎಂ ಏಕನಾಥ ಶಿಂಧೆ, ಡಿಸಿಎಂ ಫಡ್ನವಿಸ್ ಸರ್ಕಾರ ಭ್ರಷ್ಟ ಸರ್ಕಾರ ಎಂದು ನಾನು ಕೇಳಿದ್ದೇನೆ. ಈ ಭ್ರಷ್ಟ ಸರ್ಕಾರ ತೆಗೆದು ಹಾಕುವ ಸಮಯ ಬಂದಿದೆ ಎಂದು ಸಿದ್ದರಾಮಯ್ಯ ಕರೆ ನೀಡಿದರು. ಗ್ಯಾರಂಟಿ ಯೋಜನೆಯಡಿ ಶಕ್ತಿ ಯೋಜನೆ ಜಾರಿ ಮಾಡಿದ್ದೇವೆ, ಇದರಿಂದ ಮಹಿಳೆಯರು ಉಚಿತ ಬಸ್ ಪ್ರಯಾಣ ಮಾಡುತ್ತಿದ್ದಾರೆ. ಗೃಹ ಜ್ಯೋತಿ ಯೋಜನೆ ಹಾಗೂ ಮಹಿಳೆಯರಿಗೆ ಎರಡು ಸಾವಿರ ರೂಪಾಯಿ ನೀಡುತ್ತೇವೆ, ಅನ್ನಭಾಗ್ಯ ಯೋಜನೆಯಡಿ 10 ಕೆಜಿ ಅಕ್ಕಿ ನೀಡುತ್ತೇವೆ. ಈ ಯೋಜನೆ ಜಾರಿಗೆ ಕೇಂದ್ರ ಬಿಜೆಪಿ ನಾಯಕರು ತಡೆ ಒಡ್ಡುತ್ತಿದ್ದಾರೆ. ಬಿಜೆಪಿ ಪಕ್ಷದವರು ಎಂಥ ನೀಚರು ಗೊತ್ತಾ ಫುಡ್ ಕಾರ್ಪೊರೇಷನ್ ಆಫ್ ಇಂಡಿಯಾ ನಮಗೆ ಅಕ್ಕಿ ಕೊಡುವುದಕ್ಕೆ ಒಪ್ಪಿಗೆ ನೀಡಿದರೂ, ಬಿಜೆಪಿ ಸರ್ಕಾರ ಇದಕ್ಕೆ ತಡೆ ನೀಡಿ, ಇದರಲ್ಲಿ ರಾಜಕೀಯ ಮಾಡುತ್ತಿದೆ ಎಂದು ಆರೋಪಿಸಿದರು.

ಸರ್ಜನ್‌ಗಳ ಸೇವೆ ಅಳತೆಗೂ ಮೀರಿದ್ದು

ಹೈಕೋರ್ಟ್ ನ್ಯಾಯಮೂರ್ತಿ ದಿನೇಶ್ ಕುಮಾರ್



ಬೆಂಗಳೂರು: ಸರ್ಜನ್‌ಗಳು ಅಳತೆ ಮೀರಿದ ಸೇವೆ ಸಲ್ಲಿಸುತ್ತಿದ್ದು, ಆಧುನಿಕ ಬದುಕಿನ ಜೀವ ರಕ್ಷಕರಾಗಿದ್ದಾರೆ ಎಂದು ರಾಜ್ಯ ಹೈಕೋರ್ಟ್ ನ್ಯಾಯ ಮೂರ್ತಿ ಜಸ್ಟಿಸ್ ದಿನೇಶ್ ಕುಮಾರ್ ಹೇಳಿದರು.ಶಸ್ತ್ರಚಿಕಿತ್ಸಕರ ದಿನದ ಅಂಗವಾಗಿ ಕರ್ನಾಟಕ ಸ್ಟೇಟ್ ಚಾಪ್ಟರ್ ಅಸೋಸಿಯೇಷನ್ ಆಫ್ ಸರ್ಜನ್ಸ್ ಆಫ್ ಇಂಡಿಯಾ ಹಾಗೂ ಸರ್ಜಿಕಲ್ ಸೊಸೈಟಿ ಆಫ್ ಬೆಂಗಳೂರು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹಿರಿಯ ಸರ್ಜನ್‌ಗಳಾದ ಪ್ರೊ. ಪಿ.ಎಸ್. ಪಾರ್ಥಿಬನ್, ಪ್ರೊ ಎನ್ ನರಸಿಂಹನ್ ರನ್ನು ಗೌರವಿಸಿ ಮಾತನಾಡಿದ ಅವರು, ಸರ್ಜನ್‌ಗಳು ಶಸ್ತ್ರಚಿಕಿತ್ಸೆ ನಡೆಸುವಾಗ ಜೀವನದಲ್ಲಿ ಒಮ್ಮೆ ಮಾತ್ರ ನೋವು ನೀಡುತ್ತಾರೆ. ಆದರೆ ಜೀವನ ಪರ್ಯಂತ ನಗು ನಗುತಾ ಬದುಕು ಸಾಗಿಸುವಂತೆ ನಮ್ಮನ್ನು ಸಜ್ಜುಗೊಳಿಸುತ್ತಾರೆ. ಶಸ್ತ್ರಚಿಕಿತ್ಸಕರು ಮಾನವ ರೂಪದ ದೇವರು ಎಂದರು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಕುಲಪತಿ ಡಾ. ಎಂ. ಕೆ ರಮೇಶ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ವೈದ್ಯರ ಮೇಲೆ ಹಲ್ಲೆಗಳು ನಡೆಯುತ್ತಿದ್ದು, ಸಣ್ಣ ಸಣ್ಣ ವಿಚಾರಗಳು ಸಹ ಮಾಧ್ಯಮಗಳಲ್ಲಿ ಅತಿರಂಜಿತವಾಗಿ ವರದಿಯಾಗುತ್ತಿವೆ. ಸಾಮಾಜಿಕ ಜಾಲ ತಾಣಗಳಲ್ಲಿ ಟ್ರೋಲ್ ಆಗುತ್ತಿವೆ. ವೈದ್ಯಕೀಯ ಕಾನೂನು ರೂಪಿಸುವ ಮುನ್ನ ವೈದ್ಯಕೀಯ ಸಮೂಹದ ಅಭಿಪ್ರಾಯ ಪಡೆಯಬೇಕು. ಇಲ್ಲವಾದಲ್ಲಿ ಕಾನೂನು ನಿರುಪಯುಕ್ತವಾಗಿದೆ ಎಂದರು.ಶಸ್ತ್ರಚಿಕಿತ್ಸಾ ತಜ್ಞರು ಮತ್ತೊಬ್ಬರ ಜೀವ ರಕ್ಷಣೆಗಾಗಿ ಸದಾ ಶ್ರಮಿಸುತ್ತಿದ್ದಾರೆ: ಕರ್ನಾಟಕ ಸ್ಟೇಟ್ ಚಾಪ್ಟರ್ ಅಸೋಸಿಯೇಷನ್ ಆಫ್ ಸರ್ಜನ್ಸ್ ಆಫ್ ಇಂಡಿಯಾ ಅಧ್ಯಕ್ಷ ಡಾ ಹೆಚ್ ವಿ ಶಿವರಾಮ್ ಮಾತನಾಡಿ, ಶಸ್ತ್ರಚಿಕಿತ್ಸಾ ತಜ್ಞರುಗಳು ಮತ್ತೊಬ್ಬರ ಜೀವ ರಕ್ಷಣೆಗಾಗಿ ಸದಾ ಶ್ರಮಿಸುತ್ತಿದ್ದಾರೆ. ಸರ್ಕಾರಿ, ಸಣ್ಣ ಸಣ್ಣ ಆಸ್ಪತ್ರೆಗಳಲ್ಲೂ ಜೀವ ರಕ್ಷಣೆಗಾಗಿ ಹೋರಾಟ ಮಾಡುತ್ತಿದ್ದಾರೆ. ನಗರ, ಅರೆ ನಗರ ಪ್ರದೇಶಗಳಲ್ಲಿ ಉಚಿತ ಶಸ್ತ್ರಚಿಕಿತ್ಸೆ ಮತ್ತಿತರ ಆರೋಗ್ಯ ಸೇವಾ ಚಟುವಟಿಕೆಗಳಲ್ಲೂ ತೊಡಗಿದ್ದಾರೆ. ನಮ್ಮ ಸರ್ಜಿಕಲ್ ಸೊಸೈಟಿ ಸಂಸ್ಥೆಯಲ್ಲಿ 1500ಕ್ಕೂ ಹೆಚ್ಚು ಖ್ಯಾತ ಸರ್ಜಿಕಲ್ ಡಾಕ್ಟರ್‌ಗಳು ಇದ್ದಾರೆ ಎಂದು ಹೇಳಿದರು.

ಸರ್ಜಿಕಲ್ ಸೊಸೈಟಿ ಆಫ್ ಬೆಂಗಳೂರು ಆಯೋಜಿಸಿದ್ದ ಕಾರ್ಯಕ್ರಮಸರ್ಜಿಕಲ್ ಸೊಸೈಟಿ ಆಫ್ ಬೆಂಗಳೂರು ಆಯೋಜಿಸಿದ್ದ ಕಾರ್ಯಕ್ರಮಟೂರಿಸಂನಲ್ಲಿ ಬೆಂಗಳೂರು ನಗರ ವಿಶ್ವಮಟ್ಟದಲ್ಲಿ ಹೆಸರು ಪಡೆದಿದೆ: ಬೆಂಗಳೂರು ಸರ್ಜಿಕಲ್ ಸೊಸೈಟಿ ಅಧ್ಯಕ್ಷ ಡಾ ವೆಂಕಟೇಶ್ ಮಾತನಾಡಿ, ಶುಶ್ರುತರವರು ವಿಶ್ವದ ಮೊದಲ ಆಪರೇಷನ್ ಮಾಡಿದ ಸರ್ಜಿಕಲ್ ವೈದ್ಯ. ಅದರಿಂದ ಅಂತಾರಾಷ್ಟ್ರೀಯ ಶಸ್ತ್ರಚಿಕಿತ್ಸಕರ ದಿನವನ್ನು ಆಚರಿಸಲಾಗುತ್ತಿದೆ. ಕ್ಯಾನ್ಸರ್ ಮತ್ತು ಹೃದಯ ಸಂಬಂಧಿತ ಮತ್ತು ಹಲವಾರು ರೋಗಗಳ ನಿವಾರಣೆಗಾಗಿ ಶಸ್ತ್ರಚಿಕಿತ್ಸೆ ಮುಖ್ಯ.

ಇಂದು ಮೆಡಿಕಲ್ ಟೂರಿಸಂನಲ್ಲಿ ಬೆಂಗಳೂರು ನಗರ ವಿಶ್ವಮಟ್ಟದಲ್ಲಿ ಹೆಸರು ಪಡೆದಿದೆ ಎಂದು ಹೇಳಿದರು.ಶಸ್ತ್ರಚಿಕಿತ್ಸೆಯ ಭವಿಷ್ಯ, ಆಧುನಿಕ ತಂತ್ರಜ್ಞಾನ ಕುರಿತು ಯೆನೆಪೊಯ ವೈದ್ಯಕೀಯ ಕಾಲೇಜಿನ ಪ್ರೊಫೆಸರ್ ಡಾ. ಎಂ. ವಿಜಯ ಕುಮಾರ್ ಉಪನ್ಯಾಸ ನೀಡಿದರು. ಕರ್ನಾಟಕ ಸ್ಟೇಟ್ ಚಾಪ್ಟರ್ ಅಸೋಸಿಯೇಷನ್ ಆಫ್ ಸರ್ಜನ್ಸ್ ಆಫ್ ಇಂಡಿಯಾ ಅಧ್ಯಕ್ಷ ಡಾ. ಹೆಚ್. ವಿ ಶಿವರಾಮ್, ಖಜಾಂಚಿ ಡಾ. ರಾಜಶೇಖರ್ ಸಿ ಜಕ್ಕಾ, ಡಾ. ಕೆ. ಎಲ್. ವೆಂಕಟೇಶ್, ಡಾ. ಮನೀಶ ಜೋಶಿ ಮತ್ತಿತರರು ಉಪಸ್ಥಿತರಿದ್ದರು.

ರಾಜ್ಯಮಟ್ಟದ ಜೋಡಿ ಎತ್ತಿನಗಾಡಿ ಓಟ'ದ ಸ್ಪರ್ಧೆ

ಸಾಣೇಹಳ್ಳಿ:ಬಸವಣ್ಣನವರು 'ದಯವಿಲ್ಲದಾ ಧರ್ಮ ಅದಾವುದಯ್ಯಾ' ಎಂದು ಪ್ರಶ್ನಿಸಿದ್ದಾರೆ. ಇದರರ್ಥ ಸಕಲ ಜೀವಿಗಳಲ್ಲಿಯೂ ದಯೆ ತೋರಬೇಕು ಎಂಬುದು. ಆದರೆ ಎಲ್ಲ ಸಂದರ್ಭದಲ್ಲಿ ದಯೆಯನ್ನು ಅನುಕರಣೆ ಮಾಡ್ಲಿಕ್ಕೆ ಆಗಲ್ಲ. ಹಾಗಂತ ಅನಗತ್ಯವಾಗಿ ಪ್ರಾಣಿಗಳಿಗೆ ಹಿಂಸೆ ಕೊಡಬಾರದು. ಸ್ಪರ್ಧೆಯ ಸಂದರ್ಭದಲ್ಲಿ ಎತ್ತುಗಳಿಗೆ ಚಾಟಿಯ ಏಟನ್ನು ಕೊಟ್ಟರೆ ನಮ್ಮ ಹೃದಯಕ್ಕೇ ಚಾಟಿ ಕೊಟ್ಟಂತೆ ಭಾಸವಾಗುತ್ತದೆ ಎಂದು ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳವರು ಹೇಳಿದರು.ಇಲ್ಲಿನ ಯುವಕರು ಏರ್ಪಡಿಸಿದ್ದ 'ರಾಜ್ಯಮಟ್ಟದ ಜೋಡಿ ಎತ್ತಿನಗಾಡಿ ಓಟ'ದ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದ ಶ್ರೀ ಗಳು ಸ್ಪರ್ಧೆಗಳು ಮಾನವೀಯತೆಯ ಎಲ್ಲೆಯನ್ನು ಮೀರಬಾರದು. ಎತ್ತಿನ ಗಾಡಿಗಳ ಈ ಸ್ಪರ್ಧೆಯು ಎತ್ತುಗಳ ಬಗೆಗೆ ಕಾಳಜಿವಹಿಸುವಂತೆ ಮಾಡುತ್ತದೆ. ಅಲ್ಲದೆ ನಮ್ಮ ಪರಂಪರೆಯನ್ನೂ ಪೋಷಿಸುತ್ತದೆ. ಯುವಕರ ಈ ಉತ್ಸಾಹ ಸನ್ಮಾರ್ಗದ ಕಡೆಗೆ ಕರೆದುಕೊಂಡು ಹೋಗುವಂತಾಗಬೇಕು. ನಿಮಗೆಲ್ಲ ತಿಳಿದಿರುವ ಹಾಗೆ ನಮ್ಮ ಮಠ, ಕಲಾಸಂಘದಿಂದ ವರ್ಷಪೂರ್ತಿ ನಿರಂತರವಾಗಿ ಸಾತ್ವಿಕ ಚಟುವಟಿಕೆಗಳು ನಡೆಯುತ್ತವೆ. ಕ್ರೌರ್ಯದ, ಹಿಂಸೆಯ ಚಟುವಟಿಕೆಗಳಿಗಿಂತ ಸಾತ್ವಿಕ ಚಟುವಟಿಕೆಗಳು ನಿರಂತರವಾಗಿ ನಡೆಯಬೇಕು. ಆಗ ಸಹಜವಾಗಿಯೇ ನಮ್ಮೊಡನೆ ಇರುವ ಪ್ರಾಣಿಗಳ ಬಗ್ಗೆಯೂ ಪ್ರೀತಿ ತಾನಾಗಿಯೇ ಮೂಡುತ್ತದೆ ಎಂದರು. ಯುವಮುಖಂಡ ಹೆಬ್ಬಳ್ಳಿಯ ದಿಲೀಪ್ ಗುರುಸ್ವಾಮಿ ಮಾತನಾಡಿ ಜಾನಪದ ಸೊಗಡು ಮುಂದಿನ ಪೀಳಿಗೆಗೆ ಪರಿಚಯ ಮಾಡಿಕೊಡುವ ಕೆಲಸವನ್ನು ಸಾಣೇಹಳ್ಳಿಯ ಯುವಕರು ಮಾಡ್ತಾ ಇರುವುದು ತುಂಬಾ ಸಂತೋಷ. ನೈತಿಕತೆ, ಪ್ರಾಮಾಣಿಕತೆಯೇ ನಮ್ಮ ಸಂಸ್ಕೃತಿಯಲ್ಲಿದೆ. ನೈತಿಕತೆ, ಪ್ರಾಮಾಣಿಕತೆ ಪ್ರತಿಯೊಬ್ಬ ಯುವಕರು ರೂಢಿಸಿಕೊಳ್ಳ ಬೇಕೆಂದರು.ರಾಜ್ಯದ ಮೂಲೆ ಮೂಲೆಯಿಂದ ಸುಮಾರು ಐವತ್ತು ತಂಡಗಳು ಭಾಗವಹಿಸಿದ್ದವು. ಪ್ರಥಮ ಬಹುಮಾನವನ್ನು ಬೌರ್ಯ ಮತ್ತು ಬ್ರಾಂಡ್ ಅಣ್ಣಪ್ಪ ಸಾಣೇಹಳ್ಳಿ, ದ್ವಿತೀಯ ಬಹುಮಾನವನ್ನು ಇಂದ್ರ ಮತ್ತು ಬೀರ ಮಂಡ್ಯ, ತೃತೀಯ ಬಹುಮಾನವನ್ನು ಮಹಾರಾಜ ಮತ್ತು ಜಗ್ಗು, ಚಿಕ್ಕಮಗಳೂರು, ಚತುರ್ಥಿ ಬಹುಮಾನವನ್ನು ಸರ್ಜ ಮತ್ತು ಕಲ್ಕಿ, ಅಜ್ಜಂಪುರ ಪಡೆದುಕೊಂಡವು.

ಪರಿಸರ ರಕ್ಷಣೆಯ ಜಾಗೃತಿ ನಿಮಿತ್ತ ಗಿಡನೆಟ್ಟ ಸಾಲುಮರದ ತಿಮ್ಮಕ್ಕ

ದಾವಣಗೆರೆ:ದಾವಣಗೆರೆ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಪರಿಸರ ದಿನಾಚರಣೆಯ ನಿಮಿತ್ತ ಭೇಟಿ ನೀಡಿದ ಪದ್ಮಶ್ರೀ ಪುರಸ್ಕೃತ ಪರಿಸರದ ಪ್ರೇಮಿ ಸಾಲುಮರದ ತಿಮ್ಮಕ್ಕ ಗಿಡ ನೆಟ್ಟರು. ನಂತರ ಮಾತನಾಡಿದ ತಿಮ್ಮಕ್ಕನವರು ಪರಿಸರ ನಾಶದಿಂದ ಜಗತ್ತು ಅಪಾಯಕಾರಿ ಸ್ಥಿತಿ ತಲುಪಿದೆ. ಶುದ್ಧ ಗಾಳಿ,ಬೆಳಕು, ನೀರು, ಇಲ್ಲದೆ ಜನರು ಹಲವಾರು ರೋಗಗಳಿಗೆ ಬಲಿಯಾಗುತ್ತಿದ್ದಾರೆ. ಈ ಎಲ್ಲಾ ಸಮಸ್ಯೆಗಳಿಗೆ ಪರಿಸರ ರಕ್ಷಣೆ ಒಂದೇ ಪರಿಹಾರ ಮಾರ್ಗ ಎಂದು ಕರೆ ನೀಡಿದರು .ತಿಮ್ಮಕ್ಕ ಅವರ ಪುತ್ರ ಉಮೇಶ ಬಳ್ಳೂರ ಮಾತನಾಡಿ ಕಾಡು ಕಡಿದು ನಾಡು ಮಾಡುತ್ತಿದ್ದಾರೆ.ಆದರೆ ಗಿಡಗಳನ್ನು ನೆಡುವುದನ್ನು ಮರೆಯುತ್ತಿದ್ದಾರೆ ,ನಮ್ಮ ಮಕ್ಕಳನ್ನು ಕಾಪಾಡಿದಂತೆ ಗಿಡಗಳನ್ನು ನೆಟ್ಟು ಪೋಷಿಸಿದರೆ ಎಲ್ಲರ ಜೀವನ ಸಾರ್ಥಕವಾಗುತ್ತದೆ ಎಂದು ತಿಳಿಹೆಳಿದರು .ಪ್ರಾಂಶುಪಾಲರಾದ ಡಾ.ಎಸ್.ಆರ್.ಅಂಜನಪ್ಪ ಮಾತನಾಡಿ ಪರಿಸರ ರಕ್ಷಣೆಯ ಜಾಗೃತಿ ಮೂಡಿಸಲು ತಮ್ಮ 112ನೇ ವಯಸ್ಸಿನಲ್ಲಿ ದನವರಿ ಯದಂತೆ ಜನರಿಗೆ ಪ್ರೇರಣೆ ನೀಡುತ್ತಿರುವ ತಿಮ್ಮಕ್ಕ ಅವರ ಸೇವೆ ಸ್ಮರಣೀಯ ಎಂದು ನುಡಿದರು. ಕಾರ್ಯಕ್ರಮದಲ್ಲಿ ಪರಿಸರ ವಿಜ್ಞಾನ ವಿಭಾಗದ ಮುಖ್ಯಸ್ಥ ಪ್ರೊ. ತಿರುಮಲ, ಹಳೆ ವಿದ್ಯಾರ್ಥಿ ಸಂಘದ ಸಂಚಾಲಕ ,ಪ್ರೊ. ಭೀಮಣ್ಣ ಸುಣಗಾರ್, ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ರುದ್ರಪ್ಪ, ಪ್ರೊ. ಮಂಜಣ್ಣ, ಪ್ರೊ. ಸೋಮಶೇಖರ್, ಪ್ರೊ. ಜಕ್ಕವ್ವನವರ ಮಂಜುನಾಥ, ಪ್ರೊ. ರಾಜಕುಮಾರ ಹಾಗೂ ಬೋಧಕ, ಬೋಧಕೇತರ ವರ್ಗದವರು ಮತ್ತು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಸೇಂಟ್ ಜಾನ್ಸ್ ಶಾಲೆಯಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ



ದಾವಣಗೆರೆ:ನಗರದ ಸೇಂಟ್‌ಜಾನ್ಸ್ ವಿದ್ಯಾಸಂಸ್ಥೆಯ ಶಾಲಾ ಆವರಣದಲ್ಲಿ 9 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಶ್ರೀ. ಪತಂಜಲಿ ಯೋಗ ಶಿಕ್ಷಣ ಸಮಿತಿಯ ರಾಮಚಂದ್ರ ಅಣ್ಣಾಜಿಯವರ ಸಮ್ಮುಖದಲ್ಲಿ ವಿದ್ಯಾರ್ಥಿಗಳಿಗೆ ಯೋಗಾಭ್ಯಾಸವನ್ನು ಮಾಡಿಸಲಾಯಿತು. ವಿದ್ಯಾರ್ಥಿಗಳು ತಮ್ಮ ದಿನಚರಿಯಲ್ಲಿ ಯೋಗಾ ಭ್ಯಾಸವನ್ನು ರೂಢಿಸಿಕೊಳ್ಳಬೇಕೆಂದು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ಹೆಚ್.ಅನಿಲ್ ಕುಮಾರ್, ಕಾರ್ಯದರ್ಶಿಗಳಾದ ಉಮಾಪತಯ್ಯ ಹಾಗೂ ಖಜಾಂಚಿಗಳಾದ ಪ್ರವೀಣ್ ಹುಲ್ಲುಮನೆಯವರು ಹಾಗೂ ಪ್ರಾಂಶುಪಾಲರಾದ ಸಯ್ಯದ್ ಆರಿಫ್ ಆರ್. ಹಾಗೂ ಶ್ರೀಮತಿ ಪ್ರೀತಾ. ಟಿ.ರೈ, ಉಪಪ್ರಾಂಶುಪಾಲರಾದ ನೇತ್ರಾವತಿ ಹಾಗು ಶಿಕ್ಷಕವೃಂದದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಶಿಕ್ಷಣಕ್ಕೆ ಬಡತನ ಶಾಪವಲ್ಲ :ಶಾಸಕ ಬಿ.ದೇವೇಂದ್ರಪ್ಪ

ಸಾರಿಗೆ ಬಸ್‌ನಲ್ಲಿ 7 ಕೋಟಿಗೂ ಅಧಿಕ ಮಹಿಳೆಯರ ಪ್ರಯಾಣ

ಬೆಂಗಳೂರು, [redacted]:ರಾಜ್ಯದ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಉಚಿತ ಪ್ರಯಾಣ ಜಾರಿಗೆ ಬಂದ ಬಳಿಕ ಇದುವರೆಗೆ ಕೋಟ್ಯಂತರ ಮಹಿಳೆಯರು ಪ್ರವಾಸ ಮಾಡಿದ್ದಾರೆ. ಕಳೆದ 15 ದಿನಗಳಲ್ಲಿ 7 ಕೋಟಿಗೂ ಅಧಿಕ ಮಹಿಳೆಯರು ಉಚಿತ ವ್ಯವಸ್ಥೆ ಲಾಭ ಪಡೆದಿದ್ದಾರೆ.

ವಾರಾಂತ್ಯವಾದ ಇಂದೂ ಕೂಡ ರಾಜ್ಯದ ಪ್ರೇಕ್ಷಣೀಯ ಮತ್ತು ಧಾರ್ಮಿಕ ಸ್ಥಳಗಳಲ್ಲಿ ಮಹಿಳೆಯರು ಸರ್ಕಾರಿ ಬಸ್‌ಗಳಲ್ಲಿ ತಂಡೋಪತಂಡವಾಗಿ ಪ್ರಯಾಣಿಸಿದ್ದಾರೆ. ಹೀಗಾಗಿ ಪುಣ್ಯಕ್ಷೇತ್ರಗಳಿಗೆ ಬಸ್‌ಗಳಲ್ಲಿ ಜನಸಂದಣಿ ಕಂಡು ಬಂದಿದೆ.

ನಿನ್ನೆ ಒಂದೇ ದಿನ 58,14,524 ಪ್ರಯಾಣಿಕರು ಸಂಚರಿಸಿದ್ದಾರೆ. ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ 17,29,314, ವಾಯುವ್ಯ ಸಾರಿಗೆ ಬಸ್‌ನಲ್ಲಿ 14,01,910 ಮಹಿಳೆಯರು ಹಾಗೂ ಕಲ್ಯಾಣ ಕರ್ನಾಟಕ ಸಾರಿಗೆಯಲ್ಲಿ 7,88,156 ಮಹಿಳೆಯರು ಪ್ರಯಾಣಿಸಿದ್ದಾರೆ.

ಜೂ. 11 ರಿಂದ 24ರೊಳಗೆ 7,15,58,775 ಮಹಿಳೆಯರು ಪ್ರಯಾಣ ಮಾಡಿದ್ದಾರೆ. ಇದರ ವೆಚ್ಚ 166,09,27,255ರೂ.ಗಳಷ್ಟಾಗಿದೆ ಎಂದು ಸಾರಿಗೆ ನಿಗಮ ಮಾಹಿತಿ ನೀಡಿದೆ. ಬಿಎಂಟಿಸಿ ಬಸ್‌ನಲ್ಲೂ ನಿನ್ನೆ 18,95,144 ಮಹಿಳೆಯರು ಪ್ರಯಾಣ ಮಾಡಿದ್ದಾರೆ.

ಆಸ್ಟ್ರೇಲಿಯಾ ಪ್ರಧಾನಿ ಚೀನಾ ಭೇಟಿ

ಸಿಡ್ನಿ, [redacted]ಂಗ್‌ನಲ್ಲಿ ಬಂಧನಕ್ಕೊಳಗಾದ ಆಸ್ಟ್ರೇಲಿಯಾದ ಪತ್ರಕರ್ತರ ಬಗ್ಗೆ ಕಳವಳ ವ್ಯಕ್ತಪಡಿಸಿರುವ ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್, "ಸೂಕ್ತ ಸಮಯದಲ್ಲಿ" ಚೀನಾ ಭೇಟಿಯ ದಿನಾಂಕ ನಿಗದಿಪಡಿಸುವುದಾಗಿ ಹೇಳಿದ್ದಾರೆ..

ಆಸ್ಟ್ರೇಲಿಯಾದ ಕೆಲವು ಉತ್ಪನ್ನಗಳ ಮೇಲೆ ಹಾಕಲಾದ ಅನಧಿಕೃತ ಚೀನಿ ನಿಷೇಧ ಮತ್ತು ಸುಂಕ ಕೊನೆಗೊಳಿಸಲು ಅಲ್ಬನೀಸ್ ಚೀನಾಕ್ಕೆ ಭೇಟಿ ನೀಡುವ ಕುರಿತು ಚರ್ಚೆ ನಡೆಯುತ್ತಿವೆ ಎಂದಿದ್ದಾರೆ.

ಸೂಕ್ತ ಸಮಯದಲ್ಲಿ ಚೀನಾಕ್ಕೆ ಭೇಟಿ ನೀಡುವ ದಿನಾಂಕ ಅಂತಿಮಗೊಳಿಸಲಾಗುವುದು, ಜುಲೈನಲ್ಲಿ ಲಿಥುವೇನಿಯನ್ ರಾಜಧಾನಿ ವಿಲ್ನಿಯಸ್‌ನಲ್ಲಿ ನ್ಯಾಟೋ ಶೃಂಗಸಭೆಗೆ ನಡೆಯಲಿದೆ. ಅದಕ್ಕೂ ಮುನ್ನ ಚೀನಾ ಭೇಟಿಯ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದಿದ್ದಾರೆ. ಚೀನಾದಲ್ಲಿ ಬಂಧನಕ್ಕೊಳಗಾದ ಆಸ್ಟ್ರೇಲಿಯಾ ಪ್ರಜೆಗಳನ್ನು ಪ್ರಧಾನಿ ಚೀನಾ ಬೇಟಿಗೆ ಮುಂಚಿತವಾಗಿ ಬಿಡುಗಡೆ ಮಾಡಲಾಗುತ್ತದೆಯೇ ಎಂಬುದರ ಕುರಿತು ಮಾಹಿತಿ ನೀಡಲು ಅಲ್ಬನೀಸ್ ನಿರಾಕರಿಸಿದ್ದಾರೆ.

2020ರ ಸೆಪ್ಟೆಂಬರ್ 2020 ರಲ್ಲಿ ಬೀಜಿಂಗ್‌ನಲ್ಲಿ ಬಂಧಿಸಲ್ಪಟ್ಟಿರುವ ಆಸ್ಟ್ರೇಲಿಯಾದ ಪತ್ರಕರ್ತ ಚೆಂಗ್ ಲೀ ಅವರನ್ನು ಬಿಡುಗಡೆ ಮಾಡುವಂತೆ ಚೀನಾ ಸರ್ಕಾರಕ್ಕೆ ಸೂಚಿಸುವುದಾಗಿ ಅವರು ತಿಳಿಸಿದ್ದಾರೆ.

"ಎರಡು ಮಹಾನ್ ರಾಷ್ಟ್ರಗಳ" ನಡುವಿನ ವ್ಯಾಪಾರಕ್ಕೆ ಯಾವುದೇ ಅಡೆತಡೆ ನಿವಾರಣೆಗೆ ಆಸ್ಟ್ರೇಲಿಯಾ ಸಲಹೆ ನೀಡುವುದನ್ನು ಮುಂದುವರೆಸಲಿದೆ. ಚೀನಾಕ್ಕೆ ರಫ್ತು ಮಾಡುವುದು ಆಸ್ಟ್ರೇಲಿಯಾ ಉತ್ಸುಕವಾಗಿದೆ ಎಂದು ಹೇಳಿದ್ದಾರೆ. ವ್ಯಾಪಾರ ಸಚಿವ ಡಾನ್ ಫಾರೆಲ್ ಬೀಜಿಂಗ್ ಪ್ರವಾಸದಿಂದ ಹಿಂದಿರುಗಿದ ದಿನಗಳ ನಂತರ ಆಸ್ಟ್ರೇಲಿಯಾದ ಮರದ ಆಮದುಗಳನ್ನು ಪುನರಾರಂಭಿಸಲು ನಿರ್ಧರಿಸಲಾಗಿದೆ ಎಂದು ಚೀನಾ ಸರ್ಕಾರ ಇತ್ತೀಚೆಗೆ ತಿಳಿಸಿತ್ತು. ಡಿಸೆಂಬರ್‌ನಲ್ಲಿ ವಿದೇಶಾಂಗ ಸಚಿವ ಪೆನ್ನಿ ವಾಂಗ್ ಅವರ ಭೇಟಿಯು ವಾರಗಳ ನಂತರ ಕಲ್ಲಿದ್ದಲು ಸಾಗಣೆ ಪುನರಾರಂಭವಾಗಿದೆ ಎನ್ನುವುದನ್ನು ಇಲ್ಲಿ ಸ್ಮರಿಸಬಹುದು.

ಹರಿಹರ ಪೊಲೀಸರಿಂದ ಕರ್ಕಶ ಶಬ್ದದ ಬೈಕುಗಳಿಗೆ ಕಡಿವಾಣ

ಹರಿಹರ. ಕರ್ಕಶ ಶಬ್ದ ದ್ವಿಚಕ್ರ ವಾಹನದ ವಿರುದ್ಧ ಪ್ರಕರಣ ದಾಖಲಿಸಿ ದಂಡ ವಸೂಲಿ ಮಾಡಿ ಸೈಲೆನ್ಸರ್ ಗಳನ್ನು ಹೊಸಪಡಿಸಿಕೊಂಡಿರುವ ಘಟನೆ ಹರಿಹರನಗರ ಪೋಲಿಸ್ ಠಾಣೆಯಲ್ಲಿ ನಡೆದಿದೆ. ಸಾರ್ವಜನಿಕರು ಸಂಘ ಸಂಸ್ಥೆಯವರು ದೂರು ಬಂದ ಹಿನ್ನೆಲೆಯಲ್ಲಿ ದ್ವಿಚಕ್ರ ವಾಹನಗಳಿಗೆ ಅಳವಡಿಸಿ ಸಾರ್ವಜನಿಕರಿಗೆ ಕಿರಿಕಿರಿ ಉಂಟು ಮಾಡುತ್ತಿದ್ದ ಕರ್ಕಶ ಶಬ್ದ ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳುವುದಕ್ಕೆ ಹರಿಹರನಗರ ಠಾಣೆ ಇನ್ಸ್ಪೆಕ್ಟರ್ ದೇವಾನಂದ ಟಿ ಪೊಲೀಸರ ತಂಡ ಮುಂದಾದರು. ಈ ವೇಳೆ ಮಾತನಾಡಿದ ಅವರು ದ್ವಿಚಕ್ರ ವಾಹನ ಸವಾರರು ವಾಹನ ತಯಾರಿಕ ಕಂಪನಿಯಿಂದ ಬರುವ ಸೈಲೆನ್ಸರ್ ಗಳನ್ನು ಸ್ಥಳೀಯವಾಗಿ ಬದಲಾಯಿಸಿ ಮಾಡಿಫೈಡ್ ಸೈಲೆನ್ಸರ್ ಗಳನ್ನು ಅಳವಡಿಸಿ ಶಬ್ದಮಾಲಿನ್ಯ ಮಾಡುತ್ತಾರೆ.

ಮೋಟಾರು ವಾಹನ ಕಾಯ್ದೆ ಅನ್ವಯ ಪ್ರಕರಣ ದಾಖಲಾಗುತ್ತದೆ. ಸಾಮಾನ್ಯವಾಗಿ ಮೋಟಾರು ವಾಹನಗಳ ನಿಯಮಗಳ ಪ್ರಕಾರ ಸೈಲೆನ್ಸರ್ ನಿಂದ ಹೊರಸೂಸುವ ಶಬ್ದವು ಇಂತಿಷ್ಟೇ ಪರಿಮಾಣದಲ್ಲಿರಬೇಕೆಂದು ರಾಷ್ಟ್ರೀಯ ಮಾನದಂಡಗಳನ್ನು ನಿಗದಿ ಪಡಿಸಲಾಗಿದೆ. ವಾಹನವು ಹೊರಸೂಸುವ ಶಬ್ದವನ್ನು ಡೆಸಿಬಲ್ ಎಂಬ ಪರಿಮಾಣದಿಂದ ಅಳೆಯುತ್ತಾರೆ. ಸಾಮಾನ್ಯವಾಗಿ ಡೆಸಿಬಲ್ ಗಿಂತ ಹೆಚ್ಚಿನ ಶಬ್ದವನ್ನು ಹೊರಸೂಸಿದರೆ ಅದನ್ನು ಶಬ್ದಮಾಲಿನ್ಯಕ್ಕೆ ಕಾರಣವಾಗುತ್ತದೆ ವಾಹನ ಓಡಾಟ ಹೆಚ್ಚಾಗಿರುವ ಬಗ್ಗೆ ಸಾರ್ವಜನಿಕರಿಂದ ಹತ್ತಾರು ದೂರುಗಳು ಬಂದಿದ್ದವು, ಸಾರ್ವಜನಿಕರ ದೂರುಗಳನ್ನು ಆಧರಿಸಿ ಪೊಲೀಸರು ಕಾರ್ಯಚರಣೆ ಮಾಡಲಾಗುತ್ತದೆ ನಗರ ಪ್ರದೇಶಗಳಲ್ಲಿ ಬೈಕ್ ಮತ್ತು ವಾಹನಗಳಿಂದ ಅತೀ ಹೆಚ್ಚು ಹೊಗೆ ಸೋಸುವ ವಾಹನಗಳು, ಅತೀ ಹೆಚ್ಚು ಶಬ್ದ ಮಾಡುವ ಬೈಕ್ ಗಳನ್ನು ಟಾರ್ಗೆಟ್ ಮಾಡಿ ಬೈಕ್ ಗಳನ್ನು ಹಿಡಿದು ಅವುಗಳ ಸೈಲೆನ್ಸರ್ ಗಳನ್ನು ಕಿತ್ತುಕೊಂಡು ವಾಹನ ಸವಾರರಿಗೆ ದಂಡ ಹಾಕಲಾಗುತ್ತದೆ ಧ್ವನಿಯ ಹಾರ್ನ್ ಅಳವಡಿಸಿರುವ ವಾಹನಗಳ ಮಾಲೀಕರ ಮತ್ತು ಗ್ಯಾರೇಜ್ ಮೆಕಾನಿಕಲ್ ವಿರುದ್ಧ ಪ್ರಕರಣವನ್ನು ದಾಖಲ ಮಾಡಿ ದಂಡವನ್ನು ಹಾಕಲಾಗುತ್ತದೆ ಅದಕ್ಕೆ ಅವಕಾಶ ಮಾಡಿಕೊಡದೆ ದ್ವಿಚಕ್ರ ವಾಹನ ಸವಾರರು ಎಚ್ಚರಿಕೆ ವಹಿಸಬೇಕು ಹಳೆ ಚಳಿ ಮುಂದುವರಿಸಿದರೆ ಮುಲಾಜಿಲ್ಲದೆ ಮೋಟಾರ್ ಕಾಯ್ದೆ ಅಡಿ ಪ್ರಕರಣ ದಾಖಲು ಮಾಡಲಾಗುತ್ತದೆ ಎಂದು ಎಚ್ಚರಿಸಿದರು. ಕರ್ಕಶ ಶಬ್ದ ಮಾಡುವ ಬೈಕ್ ಸೈಲೆನ್ಸರ್ ಗಳ ವಿರುದ್ಧ ಕಾರ್ಯಚರಣೆ ಮುಂದುವರಿಯುತ್ತದೆ ಎಂದರು.

ಪೊಲೀಸ್ ಅಧಿಕಾರಿಗಳಾದ ಮಂಜುನಾಥ್ ಬಿ ವಿ. ದೇವರಾಜ್. ನಗರ ಠಾಣೆ ಪೊಲೀಸ್ ಸಿಬ್ಬಂದಿ ವರ್ಗದವರು ಇದ್ದರು.

ಮೈಸೂರಿನಲ್ಲಿ ನಡೆದ 14 ವರ್ಷ ಒಳಗಿನ ಚೆಸ್ ಚಾಂಪಿಯನ್ ಶಿಪ್ ಪಂದ್ಯಾವಳಿಯ ಉದ್ಘಾಟನಾ ಕಾರ್ಯಕ್ರಮದಲ್ಲಿ ರೋಟರಿಯನ್ ಕೃಷ್ಣಭಟ್ ಕಡಪ್ಪು, ಗ್ರಾಂಡ್‌ಮಾಸ್ಟರ್ ತೇಜ್ ಕುಮಾರ್, ಮಂಜುನಾಥ್ ಉಪಾಧ್ಯಕ್ಷ ರೋಟರಿಯನ್ ಧರ್ಮಾನಂದ್, ನಾಗೇಂದ್ರ ಎಂ ಭಾಗವಹಿಸಿದ್ದರು.

ಪೇಜಾವರದಲ್ಲಿ ಸಿಖ್ ವ್ಯಕ್ತಿ ಹತ್ಯೆ

ಇಸ್ಲಾಮಾಬಾದ್, ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ (ಕೆಪಿಕೆ) ಪ್ರಾಂತ್ಯದ ಪೇಶಾವರದಲ್ಲಿ ಸಿಖ್ ವ್ಯಕ್ತಿಯ ಹತ್ಯೆ ಮಾಸುವ ಮುನ್ನವೇ, 48 ಗಂಟೆಗಳಲ್ಲಿ ಮತ್ತೊಬ್ಬ ಸಿಖ್ ವ್ಯಕ್ತಿಯನ್ನು ಗುಂಡಿಕ್ಕಿ ಕೊಂದಿದ್ದಾರೆ.

ಮನಮೋಹನ್ ಸಿಂಗ್ (32) ಮೃತಪಟ್ಟ ವ್ಯಕ್ತಿ. ಪೇಶಾವರದ ಉಪನಗರವಾದ ರಶೀದ್ ಗರ್ಹಿಯ ನಿವಾಸಿಯಾಗಿದ್ದಾರೆ.

ಪೇಶಾವರಕ್ಕೆ ಪ್ರಯಾಣಿಸುತ್ತಿದ್ದಾಗ ಗುಲ್ಧಾರ ಚೌಕ್ ಕಕ್ಷಾಲ್ ಬಳಿ ಶಸ್ತ್ರಸಜ್ಜಿತ ವ್ಯಕ್ತಿಗಳ ದಾಳಿಗೆ ಒಳಗಾಗಿ ಪ್ರಾಣ ತೆತ್ತಿದ್ದಾರೆ. ಗುಂಡಿನ ದಾಳಿಗೀಡಾದ ಸಿಂಗ್‌ರನ್ನು ಆಸ್ಪತ್ರೆಗೆ ಸಾಗಿಸಲಾಯಿತು. ಆದರೆ ವೈದ್ಯರು ಚಿಕಿತ್ಸೆ ನೀಡುವಷ್ಟರಲ್ಲಿ ಆತ ಸಾವನ್ನಪ್ಪಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೇಶಾವರ ಮೂಲದ ಸಿಖ್ಖರು ಮೂಲತಃ ವ್ಯಾಪಾರದಲ್ಲಿ ತೊಡಗಿಸಿಕೊಂಡಿದ್ದಾರೆ. ಹೆಸರಾಂತ ವೈದ್ಯ ಹಕೀಮ್ (ಯುನಾನಿ ವೈದ್ಯ) ರನ್ನು ಕಳೆದ ವರ್ಷ ಪೇಶಾವರದ ಅವರ ಆಸ್ಪತ್ರೆಯಲ್ಲೇ ಅಪರಿಚಿತ ಬಂದೂಕುಧಾರಿಗಳು ಗುಂಡಿಕ್ಕಿ ಹತ್ಯೆ ಮಾಡಿದ್ದರು.

ಇನ್ನೂ, ಇದು ಉದ್ದೇಶಿತ ದಾಳಿಯಾಗಿದ್ದು ಸರ್ಕಾರ ಭದ್ರತೆ ನೀಡಬೇಕು ಎಂದು ಅಲ್ಲಿನ ಸಿಖ್ ಸಮುದಾಯ ಆಗ್ರಹಿಸಿದೆ.

ಡ್ರಗ್ಸ್ ಸುದ್ದಿಯಾದ ಅಶು

ಹೈದರಾಬಾದ್, ಜೂ.25- ಡ್ರಗ್ಸ್ ಕೇಸ್‌ನಲ್ಲಿ ಜೈಲು ಪಾಲಾಗಿರುವ ಕಬಾಲಿ ಚಿತ್ರದ ನಿರ್ಮಾಪಕ ಕೆ.ಪಿ ಚೌಧರಿ ವಿಚಾರಣೆ ಸಂದರ್ಭದಲ್ಲಿ ಹಲವರ ಹೆಸರನ್ನು ಬಾಯಿಬಿಟ್ಟಿದ್ದಾನೆ. ವಿಚಾರಣೆ ವೇಳೆ ನಟಿ ಅಶು ರೆಡ್ಡಿ ಹೆಸರು ಕೇಳಿ ಬರುತ್ತಿದ್ದಂತೆಯೇ ಸಾಕಷ್ಟು ಜನರಿಗೆ ನಡುಕ ಶುರುವಾಗಿದೆ.

ಇಷ್ಟು ದಿನ ಗ್ಲ್ಯಾಮರಸ್ ಫೋಟೋ ಮೂಲಕ ಗಮನ ಸೆಳೆಯುತ್ತಿದ್ದ ನಟಿ ಅಶು ರೆಡ್ಡಿ ಈಗ ಡ್ರಗ್ಸ್ ಕೇಸ್ ಮೂಲಕ ಸುದ್ದಿ ಆಗಿದ್ದಾರೆ. ರಜನಿಕಾಂತ್ ನಟನೆಯ 'ಕಬಾಲಿ' ಚಿತ್ರದ ನಿರ್ಮಾಪಕ ಕೆಪಿ ಚೌಧರಿ ಅವರು ಡ್ರಗ್ಸ್ ಕೇಸ್‌ನಲ್ಲಿ ಬಂಧನವಾಗಿದ್ದಾರೆ. ಅಶು ರೆಡ್ಡಿ ಜೊತೆ ಅವರು ನೂರಾರು ಬಾರಿ ಫೋನ್ ಮೂಲಕ ಮಾತನಾಡಿದ್ದರು ಎನ್ನುವ ವಿಚಾರ ರಿವೀಲ್ ಆಗಿದೆ. ಡ್ರಗ್ಸ್ ಮಾರಾಟ ಮಾಡುವ ವ್ಯಕ್ತಿಯ ಜೊತೆ ಇಷ್ಟೊಂದು ದೂರವಾಣಿ ಕರೆ ಏಕೆ ಎನ್ನುವ ಪ್ರಶ್ನೆ ಪೊಲೀಸರಲ್ಲಿ ಮೂಡಿದೆ. ತೆಲುಗಿನ ಬಿಗ್ ಬಾಸ್ ಮೂಲಕ ಗಮನ ಸೆಳೆದಿದ್ದ ಅಶು ರೆಡ್ಡಿ ಸಾಕಷ್ಟು ಜನಪ್ರಿಯತೆ ಗಳಿಸಿದರು. ಆದರೆ ಈಗ ಅವರ ಹೆಸರು ಡ್ರಗ್ಸ್ ಕೇಸ್‌ನಲ್ಲಿ ಕೇಳಿ ಬಂದಿದ್ದು, ಸಾಕಷ್ಟು ಚರ್ಚೆಗೆ ಕಾರಣವಾಗಿದೆ. ಆರೋಪಿ ಕೆ.ಪಿ ಚೌಧರಿ ಅಶು ರೆಡ್ಡಿ ಮೇಲೆ ನೇರವಾಗಿ ಆರೋಪ ಮಾಡಿಲ್ಲ. ಇವರ ಮಧ್ಯೆ ಲಿಂಕ್ ಇರೋದು ವಿಚಾರಣೆ ವೇಳೆ ಗೊತ್ತಾಗಿದೆ. ಅವರ ಬಳಿ ಇದ್ದ ಮೂರು ಮೊಬೈಲ್‌ಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದರು. ಕೆಪಿ ಚೌಧರಿ ಅವರ ಒಂದು ಮೊಬೈಲ್‌ನಿಂದ ಅಶು ರೆಡ್ಡಿಗೆ ನೂರಾರು ಬಾರಿ ಫೋನ್ ಕಾಲ್ ಹೋಗಿದೆ. ಇದು ಏಕೆ ಎಂಬ ಪ್ರಶ್ನೆ ಮೂಡಿದೆ.

ಈ ಬಗ್ಗೆ ಅಶು ರೆಡ್ಡಿ ಸಾಮಾಜಿಕ ಜಾಲತಾಣದಲ್ಲಿ ಕಿಡಿ ಕಾರಿದ್ದಾರೆ. ಇದೆಲ್ಲಾ ಸುಳ್ಳು ಸುದ್ದಿ ಎಂದು ಹೇಳಿದ್ದಾರೆ. ಅನಾವಶ್ಯಕವಾಗಿ ಈ ಪ್ರಕರಣದಲ್ಲಿ ತನ್ನ ಹೆಸರನ್ನು ಎಳೆದು ತರಲಾಗುತ್ತಿದೆ ಎಂದು ಅಸಮಾಧಾನ ಹೊರಹಾಕಿದ್ದಾರೆ.

ವಿದ್ಯಾರ್ಥಿಗಳಿಗೆ ಐಎಎಸ್, ಕೆಎಎಸ್ ಉಚಿತ ತರಬೇತಿ

ಬೆಂಗಳೂರು, ಇನ್ಸ್ಪೈರ್ ಐಎಎಸ್ ಮತ್ತು ಕೆಎಎಸ್ ಕೋಚಿಂಗ್ ಇನ್ಸ್‌ಟಿಟ್ಯೂಟ್ ವತಿಯಿಂದ ಆರ್ಥಿಕವಾಗಿ ಹಿಂದುಳಿದ ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗೆ ಉಚಿತ ತರಬೇತಿ ನೀಡಲು ಮುಂದಾಗಿದೆ. ಐಎಎಸ್, ಕೆಎಎಸ್, ಪಿಡಿಒ, ಗ್ರಾಮ ಪಂಚಾಯತ್ ಕಾರ್ಯದರ್ಶಿ ಗ್ರೇಡ್-1, ಗ್ರೇಡ್-2 ಮತ್ತು ಎಸ್‌ಡಿಎಎ ಕೋರ್ಸ್‌ಗಳಿಗೆ 10 ದಿನಗಳ ಕಾಲ ಉಚಿತ ತರಬೇತಿ ನೀಡಲಿದ್ದು, ಇದರೊಂದಿಗೆ ಪೂರ್ವ ಪರೀಕ್ಷೆಗಳನ್ನು ಕೂಡ ನಡೆಸಲಾಗುವುದು ಎಂದು ಸಂಸ್ಥೆ ತಿಳಿಸಿದೆ.

ಆಸಕ್ತ ವಿದ್ಯಾರ್ಥಿಗಳು ಸಂಸ್ಥೆಯ ಕಚೇರಿಗೆ ಬಂದು ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಬೇರೆ ಜಿಲ್ಲೆಗಳ ಅಭ್ಯರ್ಥಿಗಳು ಸಂಸ್ಥೆಯ ಮೊಬೈಲ್ ನಂಬರ್ 7090090033 ಗೆ ಕರೆಮಾಡಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಈ ಮೂಲಕ ಅರ್ಹ ಅಭ್ಯರ್ಥಿಗಳು ಉಚಿತ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕಾಗಿ ಸಂಸ್ಥೆಯು ಪ್ರಕಟಣೆ ಮೂಲಕ ಕೋರಿದೆ.

ನಾರಾಯಣಸ್ವಾಮಿ ಗಣಗಲೂರು ಗ್ರಾಪಂ ಉಪಾಧ್ಯಕ್ಷ

ಹೊಸಕೋಟೆ, :ಚುನಾವಣೆಗಳಲ್ಲಿ ಸೋಲು ಗೆಲುವು ಸರ್ವ ಸಾಮಾನ್ಯ, ಆದರೆ ಚುನಾವಣೆಯಲ್ಲಿ ಗೆದ್ದವರು ಸಾರ್ವಜನಿಕರಿಗೆ ಅನುಕೂಲವಾಗುವಂತಹ ಶಾಶ್ವತ ಕೆಲಸ ಕಾರ್ಯಗಳನ್ನು ಮಾಡಿ ಮತದಾರರ ಋಣ ತೀರಿಸಬೇಕು ಎಂದು ಗಣಗಲೂರು ಗ್ರಾಮ ಪಂಚಾಯ್ತಿಯ ನೂತನ ಉಪಾಧ್ಯಕ್ಷ ಬಾಗೂರು ಬಿ.ಎಂ.ನಾರಾಯಣಸ್ವಾಮಿ ತಿಳಿಸಿದ್ದಾರೆ.

ತಾಲ್ಲೂಕಿನ ಅನುಗೊಂಡಹಳ್ಳಿ ಹೋಬಳಿಯ ಗಣಗಲೂರು ಗ್ರಾಮ ಪಂಚಾಯ್ತಿ ಆವರಣದಲ್ಲಿ ನಡೆದ ಗ್ರಾಮ ಪಂಚಾಯ್ತಿ ಉಪಾಧ್ಯಕ್ಷ ಚುನಾವಣೆಯಲ್ಲಿ ಅವಿರೋದವಾಗಿ ಆಯ್ಕೆಯಾದ ಬಳಿಕ ಮಾತನಾಡಿದ ಅವರು, ಈ ಹಿಂದೆ ಉಪಾಧ್ಯಕ್ಷರಾಗಿದ್ದ ಸಾವಿತ್ರಮ್ಮ ರಾಮಕೃಷ್ಣಪ್ಪನವರು ರಾಜಿನಾಮೆ ಸಲ್ಲಿಸಿದ ಕಾರಣ ಉಪಾಧ್ಯಕ್ಷರ ಚುನಾವಣೆ ನಡೆದಿದ್ದು ಬಿಜೆಪಿ ಪಕ್ಷದಿಂದ 6 ಸದಸ್ಯರು ಹಾಗು ಕಾಂಗ್ರೇಸ್ ಪಕ್ಷದಿಂದ 9 ಸದಸ್ಯರ ಬಲ ಹೊಂದಿದ್ದು ಉಪಾಧ್ಯಕ್ಷರ ಸ್ಥಾನಕ್ಕೆ ನಾನೊಬ್ಬನೇ ನಾಮ ಪತ್ರ ಸಲ್ಲಿಸಿದ ಕಾರಣ ನನ್ನನ್ನು ಚುನಾವಣಾದಿಕಾರಿ. ಡಾ. ಹೆಚ್.ಎಂ.ಮಂಜುನಾಥ್ ರವರು ಅವಿರೋದವಾಗಿ ಆಯ್ಕೆ ಆಮಾಡಿ ಆದೇಶ ಹೊರಡಿಸಿದ್ದಾರೆ.

ಆದ್ದರಿಂದ ನಾನು ನಮ್ಮ ಪಕ್ಷದ ಎಲ್ಲಾ ಗ್ರಾಮ ಪಂಚಾಯ್ತಿ ಸದಸ್ಯರಿಗೂ ಹಾಗು ಮುಖಂಡರಿಗೆ ಮತ್ತು ಶಾಸಕರಾದ ಶರತ್ ಬಚ್ಚೇಗೌಡರಿಗೂ ನಾನು ಅಭಿನಂದನೆಗಳನ್ನು ಸಲ್ಲಿಸುತ್ತೇನೆ.

ಹಾಗು ಯಾವುದೇ ತಾರತಮ್ಯ ಇಲ್ಲದೆ ಸರ್ಕಾರದಿಂದ ಬರುವ ಎಲ್ಲಾ ಅನುದಾನಗಳನ್ನು ಎಲ್ಲಾ ಸದಸ್ಯರಿಗೂ ಸಮನಾಗಿ ಹಂಚಿ ಗ್ರಾಮಗಳಲ್ಲಿನ ಮೂಲ ಬೂತ ಸೌಲಬ್ಯಗಳಿಗೆ ಯಾವುದೇ ತೊಂದರೆಯಾಗದಂತೆ ಕೆಲಸ ಮಾಡುತ್ತೇನೆ ಎಂದರು, ಈ ಸಂದರ್ಭದಲ್ಲಿ ಕಾಂಗ್ರೇಸ್ ಹಿರಿಯ ಮುಖಂಡ ತತ್ತನೂರು ಮಂಜುನಾಥ್‌ಗೌಡ. ಬಾಗೂರು ಪಟೇಲ್ ಶೇಖರ್, ತಿಮ್ಮರಾಯಪ್ಪ, ಮುರುಗೇಶ್. ಮುಂಡರಾಧ ಬಿ.ವಿ.ರಮೇಶ್. ಚಂದ್ರಪ್ಪ, ಕೃಷ್ಣಪ್ಪ, ಗುಂಡೂರು

ಸಾಲಬಾಧೆ: ರೈತ ಆತ್ಮಹತ್ಯೆ

ಸಿರಾ. ಸಾಲದ ಬಾಧೆ ತಾಳಲಾರದೆ ರೈತರೊಬ್ಬರು ಕೀಟನಾಶಕ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲ್ಲೂಕಿನ ಕಳುವರಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ರೈತ ಡಿ.ಹನುಮಂತರಾಜು (40) ಎಂಬುವರೇ ಆತ್ಮಹತ್ಯೆಗೆ ಶರಣಾಗಿರುವ ದುರ್ದೈವಿ.

ಈತ ಹುಣಸೇಹಳ್ಳಿ ಗ್ರಾಮದ ಬ್ಯಾಂಕ್ ಸೇರಿದಂತೆ ಫೈನಾನ್ಸ್ ಹಾಗೂ ಸ್ವಸಹಾಯ ಸಂಘಗಳ ಮೂಲಕ 10 ಲಕ್ಷಕ್ಕೂ ಹೆಚ್ಚಿನ ಸಾಲ ಮಾಡಿಕೊಂಡಿದ್ದರು. ಕೀಟನಾಶಕ ಸೇವಿಸಿದ್ದ ಇವರನ್ನು ಚಿಕಿತ್ಸೆಗಾಗಿ ಸಿರಾ ಸರ್ಕಾರಿ ಆಸ್ಪತ್ರೆಗೆ ಕೊಂಡೊಯ್ದು ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದಿದ್ದಾರೆ. ಸಾಲದ ಬಾಧೆ ತೀರಿಸಲಾಗದೆ ಹತ್ತಿ ಬೆಳೆಗೆ ಸಿಂಪಡಿಸಲು ತಂದಿದ್ದ ಕೀಟನಾಶಕ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. ಈ ಸಂಬಂಧ ತಾಲ್ಲೂಕಿನ ತಾವರೆಕೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಹೇಸರಗತ್ತೆ ಧೂಮಪಾನ ವೀಡಿಯೋ ವೈರಲ್

ಡೆಹ್ರಾಡೂನ್ ಕೇದಾರನಾಥ ಮಾರ್ಗದಲ್ಲ

ನಗರದ ಜೆ.ಪಿ. ನಗರದ ಸಂಸ್ಕೃತಿ ಬೃಂದಾವನ ಕನ್ವೆನ್ಷನ್‌ನಲ್ಲಿ ನಡೆದ ಬೆಂಗಳೂರು ದಕ್ಷಿಣ ಜಿಲ್ಲಾ ಬಿಜೆಪಿ ಕಾರ್ಯಕರ್ತರ ಸಮಾವೇಶವನ್ನು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪರವರು ಉದ್ಘಾಟಿಸಿದರು. ಸಂಸದ ತೇಜಸ್ವಿಸೂರ್ಯ, ಮಾಜಿ ಸಚಿವ ಗೋವಿಂದ ಕಾರಜೋಳ, ಶಾಸಕರಾದ ಎಂ. ಕೃಷ್ಣಪ್ಪ, ಎಂ. ಸತೀಶ್ ರೆಡ್ಡಿ, ರವಿ ಸುಬ್ರಮಣ್ಯ, ಉದಯ ಗರುಡಾಚಾರ್, ಬೆಂ.ದ. ಜಿಲ್ಲಾ ಬಿಜೆಪಿ ಅಧ್ಯಕ್ಷ ಎನ್.ಆರ್. ರಮೇಶ್, ಮತ್ತಿತರ ಮುಖಂಡರು ಉಪಸ್ಥಿತರಿದ್ದರು.

ಮಹಿಳಾ ಪಿಜಿಗಳಲ್ಲಿ ಸ್ನಾನದ ವಿಡಿಯೋ ಚಿತ್ರೀಕರಣ ಸಿಕ್ಕಿಬಿದ್ದ ಕಾಮುಕ

ಬೆಂಗಳೂರು :ಮಹಿಳಾ ಪಿಜಿಗಳಲ್ಲಿವಾಸವಿರುವಯುವತಿಯರು ಸ್ನಾನಗೃಹದಲ್ಲಿರುವ ಖಾಸಗಿ ಕ್ಷಣಗಳ ವಿಡಿಯೋ ಚಿತ್ರೀಕರಣ ಮಾಡುತ್ತಿದ್ದ ಕಾಮುಕಯುವಕನನ್ನು ಮಹಾದೇವಪುರ ಪೊಲೀಸರು ಬಂಧಿಸಿದ್ದಾರೆ.

ಚಿಕ್ಕಬಳ್ಳಾಪುರಮೂಲದ ಅಶೋಕ್ ಬಂಧಿತ ಯುವಕನಾಗಿದ್ದಾನೆ. ಮಹದೇವಪುರದ ಹೂಡಿಯಲ್ಲಿರುವ ಪಿಜಿಯಲ್ಲಿ ವಾಸವಿದ್ದ ಆರೋಪಿ, ಖಾಸಗಿ ಬ್ಯಾಂಕ್‌ನಲ್ಲಿ ಕ್ರೆಡಿಟ್ ಕಾರ್ಡ್ ವಿಭಾಗದಲ್ಲಿ ಕೆಲಸ ಮಾಡುತ್ತಿದ್ದ. ತಾನು ವಾಸಿಸುತ್ತಿದ್ದ ಪಿಜಿ ಮುಂಭಾಗದಲ್ಲೇ ಮಹಿಳಾ ಪಿಜಿ ಸಹ ಇದೆ. ಮಹಿಳಾ ಪಿಜಿಯ ಸ್ನಾನಗೃಹಕ್ಕೆಯಾರಾದರೂ ಸ್ನಾನ ಮಾಡಲು ಬರುತ್ತಿದ್ದಂತೆ ಅಲರ್ಟ್ ಆಗುತ್ತಿದ್ದ ಆರೋಪಿಯು, ಸ್ನಾನಗೃಹದ ವೆಂಟಿಲೇಷನ್ ಸ್ಥಳದಿಂದ ಯುವತಿಯರನ್ನು ತನ್ನ ಮೊಬೈಲ್‌ನಲ್ಲಿ ಚಿತ್ರೀಕರಣ ಮಾಡುತ್ತಿದ್ದ.

ಜೂನ್ 21ರಂದು ಇದೇ ರೀತಿ ಸ್ನಾನಗೃಹದ ವಿಡಿಯೋ ಮಾಡುತ್ತಿದ್ದಾಗ ಸ್ಥಳಿಯರೇ ಹಿಡಿದು ಮಹದೇವಪುರ ಠಾಣಾ ಪೊಲೀಸರ ಕೈಗೊಪ್ಪಿಸಿದ್ದಾರೆ. ಆರೋಪಿಯ ಮೊಬೈಲ್ ಫೋನ್ ಪರಿಶೀಲಿಸಿದಾಗ ಯುವತಿಯರ ಸ್ನಾನಗೃಹದ ಒಟ್ಟು 7 ವಿಡಿಯೋಗಳು ಪತ್ತೆಯಾಗಿವೆ. ಮೊಬೈಲ್ ವಶಕ್ಕೆ ಪಡೆದು ತನಿಖೆ ನಡೆಸುತ್ತಿದ್ದೇವೆ. ಕಳೆದ ಮೂರು ನಾಲ್ಕು ತಿಂಗಳಿಂದ ಆರೋಪಿ ಈ ರೀತಿಯ ಕೃತ್ಯಗಳಲ್ಲಿ ಭಾಗಿಯಾಗಿರುವುದು ಕಂಡುಬರುತ್ತಿದೆ.

ವಿಡಿಯೋ ಮಾಡಿಯುವತಿಯರಿಗೆ ಬ್ಲ್ಯಾಕ್ ಮೇಲ್ ಮಾಡುತ್ತಿದ್ದ ಬಗ್ಗೆ ಯಾವುದೇ ಮಾಹಿತಿ ಸಿಕ್ಕಿಲ್ಲ. ಈ ಬಗ್ಗೆ ಮಹಿಳಾ ಪಿಜಿಯಲ್ಲಿರುವವರನ್ನು ವಿಚಾರಿಸುತ್ತೇವೆ. ಆರೋಪಿ ವಿರುದ್ಧ ಪ್ರಕರಣ ದಾಖಲಿಸಿ, ಬಂಧಿಸಿದ್ದೇವೆ. ಪ್ರಕರಣದ ಬಗ್ಗೆ ಹೆಚ್ಚಿನ ವಿಚಾರಣೆ ನಡೆಸುತ್ತಿದ್ದೇವೆ ಎಂದು ವೈಟ್ ಫೀಲ್ಡ್ ವಿಭಾಗದ ಡಿಸಿಪಿ ಎಸ್. ಗಿರೀಶ್ ಮಾಹಿತಿ ನೀಡಿದ್ದಾರೆ.

4 ತಿಂಗಳಿಂದ ದುಷ್ಕೃತ್ಯ:

ಕಳೆದ ಮೂರು ನಾಲ್ಕು ತಿಂಗಳಿಂದ ಆರೋಪಿಯು ಈ ಮಹಿಳಾ ಪಿಜಿಯ ಸ್ನಾನಗೃಹದ ವಿಡಿಯೋಗಳನ್ನು ಮಾಡಿರುವುದು ಕಂಡುಬರುತ್ತಿದೆ. ಸದ್ಯ ಆರೋಪಿಯ ಮೊಬೈಲ್?ನಲ್ಲಿ ಒಟ್ಟು 7 ವಿಡಿಯೋಗಳಿದ್ದು, ಪರಿಶೀಲನೆ ನಡೆಸುತ್ತಿದ್ದೇವೆ ಎಂದು ಡಿಸಿಪಿ ತಿಳಿಸಿದ್ದಾರೆ.



ನಗರದ ಸತ್ಯ ಪ್ರಮೋದ ಕಲ್ಯಾಣ ಮಂಟಪದಲ್ಲಿ ಅಖಿಲ ಕರ್ನಾಟಕ ಮಾಧ್ವ ಮಹಾಸಭಾ ವತಿಯಿಂದ ನಡೆದ 4ನೇ ವಾರ್ಷಿಕ ಮಹಾಸಭೆಯಲ್ಲಿ ಪರಮ ಪೂಜ್ಯ ಸ್ವಾಮೀಜಿಗಳನ್ನು ಶಾಸಕ ಉದಯ ಗರುಡಾಚಾರ್‌ರವರು ಸನ್ಮಾನಿಸಿದರು. ಚಿತ್ರದಲ್ಲಿ ಪದಾಧಿಕಾರಿಗಳನ್ನು ಕಾಣಬಹುದು.

ಶಕ್ತಿ ಯೋಜನೆಗೆ ಕಂಡಕ್ಟರ್ ಧ್ವನಿ

ರಾಯಚೂರು, ರಾಜ್ಯ ಸರ್ಕಾರ ಜಾರಿಗೆ ತಂದಿರುವ ಶಕ್ತಿ ಯೋಜನೆಗೆ ಸಂಬಂಧಿಸಿದಂತೆ ಹಲವು ವಿಚಿತ್ರ, ವಿಶೇಷ ಮತ್ತು ವಿಭಿನ್ನ ಪ್ರಸಂಗಗಳು ದಿನವೂ ನಡೆಯುತ್ತಲೇ ಇರುತ್ತವೆ, ಅದಕ್ಕೆ ಸೇರ್ಪಡೆಯಾದ ಮತ್ತೊಂದು ಘಟನೆ ಎಂದರೆ ರಾಯಚೂರು ನಗರದಲ್ಲಿ ಬಸ್ ಕಂಡಕ್ಟರ್ ಒಬ್ಬರು ಶಕ್ತಿ ಯೋಜನೆ ಕುರಿತು ಹಾಡು ಹಾಡಿ ಟಿಕೆಟ್ ನೀಡುತ್ತಿರುವುದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಸರ್ಕಾರದ ಶಕ್ತಿ ಯೋಜನೆಪರಿಣಾಮದಿಂದ ಕಂಡಕ್ಟರ್ ಒಬ್ಬರು ಹಾಡುಗಾರರಾಗಿದ್ದಾರೆ. ಬಸ್ ನಿರ್ವಾಹಕ ಗುರು ದೇವರಮನಿ ಅವರು ಯಾರಿಗುಂಟು ಯಾರಿಗಿಲ್ಲ, ಇದು ಸಿದ್ದರಾಮಯ್ಯ ಸರ್ಕಾರದ ಶಕ್ತಿ ಯೋಜನೆ, ಎಲ್ಲಾದರೂ ಇರು.. ಎಂತಾದರೂ ಇರು.. ಎಂದೆಂದಿಗೂ ಬಸ್ಸಿನಲ್ಲಿ ಫ್ರೀ ಆಗಿ ಪ್ರಯಾಣಿಸ್ತಿರು.., ಅಕ್ಕಾ ನೀ, ತಂಗೀ.. ನೀ ಆಧಾರ್ ತೋರಿಸಿದ್ರೆ ಮಾತ್ರ ಉಚಿತ ಟಿಕೆಟ್ ಕೊಡ್ತೀನಿ ನಾನು, ಇದು ಪಕ್ಕಾ ಅಕ್ಕಾ, ಎಂದು ಪ್ರಯಾಣಿಕರಿಗೆ ಮನರಂಜನೆ ನೀಡುತ್ತಾ ಟಿಕೆಟ್ ಕೊಡುತ್ತಿದ್ದಾರೆ. ಡಾ.ರಾಜ್ ಅಪ್ಪಟ ಅಭಿಮಾನಿಯಾಗಿರುವ ಗುರುಲಿಂಗಪ್ಪ ಜನರ ನೂಕುನುಗ್ಗಲು, ಒತ್ತಡದಿಂದ ಹೊರಬರಲು ಅಣ್ಣಾವ್ರ ಹಾಡುಗಳ ಮೊರೆ ಹೋಗಿದ್ದಾರೆ. ಹಾಡುಗಳನ್ನು ಹಾಡುವ ಮೂಲಕ ಗೊಂದಲ ಗಡಿಬಿಡಿ ನಿವಾರಿಸಿ ಪ್ರಯಾಣಿಕರಿಗೆ ಟಿಕೆಟ್ ನೀಡುತ್ತಿದ್ದಾರೆ. ರಾಯಚೂರು ಡಿಪೋ ಬಸ್ ಕಂಡಕ್ಟರ್ ಗುರುಲಿಂಗಪ್ಪ ಅವರಿಂದಲೂ ಪ್ರಯಾಣಿಕರಿಗೆ ಮನರಂಜನೆ ಸಿಗುತ್ತಿದೆ. . ಜತೆಗೆ ಶಕ್ತಿಯೋಜನೆ ಕುರಿತು ಗೀತೆಯನ್ನು ಹಾಡುವ ಮೂಲಕ ಪ್ರಯಾಣಿಕರಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆ.

ಜ್ಯೂ.ರಾಜಕುಮಾರ್ ಅವರು ಮಹಿಳೆಯರಿಗೆ ಉಚಿತ ಯೋಜನೆ, ಅವಸರ ಬೇಡ' ಮುಂತಾದ ತಮ್ಮದೇ ಸಾಹಿತ್ಯವನ್ನು ಬರೆದು ಸಿನಿಮಾ ಹಾಡುಗಳ ಶೈಲಿಯಲ್ಲಿ ಹಾಡುವ ಮೂಲಕ ತಮ್ಮ ಕೆಲಸವನ್ನು ನಿರ್ವಹಿಸುತ್ತಿದ್ದಾರೆ. ಕಂಡಕ್ಟರ್‌ನ ತಾಳ್ಮೆ ಮತ್ತು ಕಲಾತ್ಮಕತೆಗೆ ಪ್ರಯಾಣಿಕರು ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ.

ನಗರದ ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ 'ಒಲಂಪಿಕ್ ಡೇ' ಪ್ರಯುಕ್ತ ಇಂದು ನಡೆದ ಓಟಕ್ಕೆ ಮುಖ್ಯಮಂತ್ರಿಗಳ ಕಾರ್ಯದರ್ಶಿ, ಅಧ್ಯಕ್ಷ ಡಾ. ಕೆ. ಗೋವಿಂದರಾಜು ಚಾಲನೆ ನೀಡಿದರು. ನಗರ ಪೊಲೀಸ್ ಆಯುಕ್ತ ದಯಾನಂದ, ಅರ್ಜುನ್ ಪ್ರಶಸ್ತಿ ಪುರಸ್ಕೃತೆ ಪರಿಮಳ ಅಯ್ಯಪ್ಪ, ಪ್ರಧಾನ ಕಾರ್ಯದರ್ಶಿ ಟಿ. ಅನಂತರಾಜು ಇದ್ದಾರೆ.

ಪ್ರಿಯತಮೆ ಕೊಲೆಗೈದು ಪರಾರಿ ಆರೋಪಿ ಪತ್ತೆಗೆ ಲುಕ್ ಔಟ್ ಜಾರಿ

ಬೆಂಗಳೂರು, ಪ್ರಿಯತಮೆ ಕೊಲೆಗೈದು ಪರಾರಿಯಾಗಿರುವ ಆರೋಪಿಯ ಪತ್ತೆಗಾಗಿ ಪೂರ್ವ ವಿಭಾಗದ ಪೊಲೀಸರು ಎಲ್‌ಓಸಿ (ಲುಕ್ ಔಟ್ ಸರ್ಕ್ಯೂಲರ್) ಹೊರಡಿಸಿದ್ದಾರೆ.

ಹೈದರಾಬಾದ್ ಮೂಲದ ಆಕಾಂಕ್ಷಾ(23) ರನ್ನು ಉಸಿರುಗಟ್ಟಿಸಿ ಕೊಂದು ಪರಾರಿಯಾಗಿರುವ ಆಕೆ-ಯ ಪ್ರಿಯಕರ ದೆಹಲಿ ಮೂಲದ ಅರ್ಪಿತ್ ಕರಿತು ಯಾವುದೇ ರೀತಿಯ ಸುಳಿವು ದೊರೆತಿಲ್ಲ.

ಪ್ರಕರಣ ತನಿಖೆಯನ್ನು ತೀವ್ರಗೊಳಿಸಿರುವ ಜೀವನ್ ಭೀಮಾನಗರ ಪೊಲೀಸರು ಆರೋಪಿ ದೇಶ ಬಿಟ್ಟು ತೆರಳದಂತೆ ಲುಕ್ ಔಟ್ ಸರ್ಕ್ಯೂಲರ್ ಹೊರಡಿಸಿದ್ದಾರೆ ಆಕಾಂಕ್ಷಾ ಹಾಗೂ ಅರ್ಪಿತ್ ಇಬ್ಬರೂ ಸಹ ನಗರದ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದು ಇಬ್ಬರೂ ಸಹ ಕೋಡಿಹಳ್ಳಿಯ ಖಾಸಗಿ ಅಪಾರ್ಟ್‌ಮೆಂಟಿನಲ್ಲಿ ವಾಸವಿದ್ದರು. ಇತ್ತೀಚೆಗೆ ಪ್ರೊಮೋಷನ್ ಪಡೆದಿದ್ದ ಅರ್ಪಿತ್ ಹೈದರಾಬಾದಿಗೆ ತೆರಳಿದ್ದ. ಈ ನಡುವೆ ಇಬ್ಬರ ಮಧ್ಯೆ ಆಗಾಗ ಜಗಳ ನಡೆಯುತ್ತಿದ್ದು, ಬೇರೆಯಾಗಬೇಕು ಎಂದು ಗಲಾಟೆ ಮಾಡಿಕೊಂಡಿದ್ದರು. ಇದರಿಂದ ರೋಸಿಹೋಗಿದ್ದ ಅರ್ಪಿತ್ ಆಕಾಂಕ್ಷಗೆ ಒಂದು ಗತಿ ಕಾಣಿಸಬೇಕು ಎಂದು ಸಂಚು ಮಾಡಿಕೊಂಡಿದ್ದ. ಹೀಗಾಗಿ ಜೂನ್ 5ರ ರಾತ್ರಿ ಹೈದರಾಬಾದಿನಿಂದ ಆಕಾಂಕ್ಷಳನ್ನು ಕೊಲೆ ಮಾಡಲೆಂದೇ ಅರ್ಪಿತ್ ಬಂದಿದ್ದ.

ಫ್ಲಾಟಿಗೆ ಬಂದವನೇ ಲವ್ ವಿಷಯಕ್ಕೆ ಆಕಾಂಕ್ಷಾ ಜೊತೆ ಜಗಳ ತೆಗೆದು ಆಕೆಯನ್ನು ಕತ್ತುಹಿಸುಕಿ ಕೊಲೆ ಮಾಡಿ ಬಳಿಕ ಆತ್ಮಹತ್ಯೆ ಎಂಬಂತೆ ಬಿಂಬಿಸಲು ಮೃತದೇಹವನ್ನು ನೇಣು ಬಿಗಿದ ಸ್ಥಿತಿಯಲ್ಲಿ ನೇತು ಹಾಕಲು ಯತ್ನಿಸಿದ್ದ. ಆಗದಿದ್ದಾಗ ಶವವನ್ನ ಬಿಟ್ಟು ಪರಾರಿಯಾಗಿದ್ದ. ಇನ್ನು ನೆಟ್‌ವರ್ಕ್ ಆಧಾರದಲ್ಲಿ ಪೊಲೀಸರ ಕೈಗೆ ಸಿಕ್ಕಿಬೀಳಬಹುದು ಎಂದು ಆರೋಪಿ ಅರ್ಪಿತ್ ಪ್ರೇಯಸಿ ಫ್ಲಾಟ್ ನಲ್ಲೇ ಮೊಬೈಲ್ ಬಿಟ್ಟು ಹೋಗಿದ್ದ.

ಬೈಯ್ಯಪ್ಪನಹಳ್ಳಿ ರೈಲ್ವೆನಿಲ್ದಾಣದ ಕಡೆ ಪ್ರಯಾಣ ಬೆಳೆಸಿ, ಸ್ವಲ್ಪ ದೂರ ಆಟೋ, ಸ್ವಲ್ಪ ದೂರ ಕಾಲ್ನಡಿಗೆ ಮೂಲಕ ಕೆ. ಆರ್. ಪುರ ಬಳಿಯ ಬಿ. ನಾರಾಯಣಪುರದಿಂದ ಪರಾ-ರಿಯಾಗಿದ್ದ. ಆಕಾಂಕ್ಷಾಳ ಮತ್ತೋರ್ವ ರೂಮ್‌ಮೇಟ್ ಮನೆಗೆ ಬಂದಾಗ ಘಟನೆ ಬೆಳಕಿಗೆ ಬಂದಿದ್ದು, ಜೀವನ್ ಭೀಮಾ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಪ್ರಕರಣ ದಾಖಲಿಸಿಕೊಂಡಿದ್ದ ಜೀವನ್ ಭೀಮಾ ನಗರ ಠಾಣಾ ಪೊಲೀಸರು ವಿಶೇಷ ತಂಡ ರಚಿಸಿಕೊಂಡು ತನಿಖೆ ಆರಂಭಿಸಿದ್ದರು. ಆರೋಪಿಯ ಕುಟುಂಬಸ್ಥರು, ಪರಿಚಿತರು, ಆಪ್ತರ ವಿಚಾರಣೆಯ ಬಳಿಕವೂ ಆತನ ಸುಳಿವು ಪತ್ತೆಯಾಗಿಲ್ಲ. ಈ ಹಿನ್ನೆಲೆಯಲ್ಲಿ ಆರೋಪಿತನ ಪತ್ತೆಗೆ ಲುಕ್ ಔಟ್ ನೋಟಿಸ್ ಹೊರಡಿಸಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

ಲಾರಿ ಹರಿದು ಬೈಕ್ ಸವಾರರು ಸ್ಥಳದಲ್ಲೇ ಸಾವು

ಮೈಸೂರು, -ಲಾರಿ ಹರಿದು ಬೈಕ್ ಸವಾರರಿಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದ ಘಟನೆ ನಂಜನಗೂಡು ತಾಲೂಕಿನ ಕಳಲೆ ಗೇಟ್ ಬಳಿ ನಡೆದಿದೆ. ಕಳಲೆ ಗ್ರಾಮದ ಶಿವರಾಜ್(50), ಪಿ.ಮಹೇಶ್(33) ಮೃತರ್ದುರ್ದೈವಿಗಳು. ಗುಂಡ್ಲುಪೇಟೆ ಕಡೆಗೆ ಹೋಗುತ್ತಿದ್ದ ಲಾರಿಯ ಹಿಂಬದಿಯ ಚಕ್ರ ಬೈಕ್‌ನಲ್ಲಿದ್ದ ಇಬ್ಬರು ಸವಾರರ ಮೇಲೆ ಹರಿದು ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ.

ಹಿಂದೆಯಿಂದ ಮತ್ತೊಂದು ಬೈಕ್‌ನಲ್ಲಿ ಬರುತ್ತಿದ್ದ ಮಹದೇವ್ ಮತ್ತು ಚಿಕ್ಕದೇವಮ್ಮ ಅವರಿಗೂ ಲಾರಿ ಡಿಕ್ಕಿಯಾಗಿ ಗಾಯಗಳಾಗಿದ್ದು, ಅವರನ್ನು ಮೈಸೂರಿನ ಕೆ.ಆರ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಈ ಕುರಿತು ನಂಜನಗೂಡು ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿ ಲಾರಿ ಚಾಲಕನನ್ನು ಪೊಲೀಸರ ವಶಕ್ಕೆ ಪಡೆದಿದ್ದಾರೆ.

ಸವಾರ ಸ್ಥಳದಲ್ಲೇ ಸಾವು:

ಚಿಕ್ಕಬಳ್ಳಾಪುರಜಿಲ್ಲೆಯ ಮಂಚೇನಹಳ್ಳಿ ತಾಲೂಕಿನ ಹೊನ್ನಪ್ಪನಹಳ್ಳಿ ಗ್ರಾಮದ ಬಳಿ ಸರ್ಕಾರಿ ಬಸ್ ಡಿಕ್ಕಿಯಾಗಿ ಬೈಕ್ ಸವಾರ ನಾಗರಾಜು(45) ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ.

ಮೃತ ನಾಗರಾಜು ಪತ್ನಿ ಬಚಾವ್ ಆಗಿದ್ದು, ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಇನ್ನು ಈ ಕುರಿತು ಅಂಬ್ಯುಲೆನ್ಸ್‌ಗೆ ಮಾಹಿತಿ ನೀಡಿದರೂ, ಗಂಟೆಗಳಾದ್ರು ಸ್ಥಳಕ್ಕೆ ಬಂದಿಲ್ಲ. ಸರಿಯಾದ ಸಮಯಕ್ಕೆ ಸ್ಥಳಕ್ಕೆ ಬಾರದ ಆಂಬುಲೆನ್ಸ್ ವಿರುದ್ಧ ಸ್ಥಳೀಯರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಟೆಕ್ಕಿ ಅಪಹರಣ ಇಬ್ಬರ ಸೆರೆ

ಬೆಂಗಳೂರು, ಸಾಫ್ಟ್‌ವೇರ್ ಇಂಜಿನಿಯರ್ ವಿಜಯಸಿಂಗ್ ಅವರನ್ನು ಅಪಹರಿಸಿ ಮಾರಣಾಂತಿಕ ಹಲ್ಲೆ ಮಾಡಿದ ಆರೋಪಿಗಳನ್ನು ಚಿಕ್ಕಬಳ್ಳಾಪುರದ ನಂದಿಗಿರಿಧಾಮ ಪೊಲೀಸರು ಬಂಧಿಸಿದ್ದಾರೆ. ಭಾವನಾ ರೆಡ್ಡಿ, ಪುಲ್ಲಾರೆಡ್ಡಿ ಬಂಧಿತ ಆರೋಪಿಗಳಾಗಿದ್ದಾರೆ. ಆಂಧ್ರಪ್ರದೇಶದ ಅನಂತಪುರದ ವಿಜಯಸಿಂಗ್ ನಗರದ ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದು, ಭಾವನಾ ರೆಡ್ಡಿ ಅವರನ್ನು ಪ್ರೀತಿಸುತ್ತಿದ್ದರು. ಆದರೆ ಪ್ರಿಯತಮೆ ಭಾವನಾ ರೆಡ್ಡಿಯೇ ಕೆಲ ದುಷ್ಕರ್ಮಿಗಳಿಗೆ ವಿಜಯಸಿಂಗ್ ಅವರನ್ನು ಅಪಹರಿಸಲು ಸುಪಾರಿ ನೀಡಿದ್ದಳು. ಅದರಂತೆ ಕಿಡಿಗೇಡಿಗಳು ಕಳೆದ ಜೂ. 16ರಂದು ಪ್ರಿಯತಮೆ ಭಾವನಾ ರೆಡ್ಡಿ ಮೂಲಕ ದೇವನಹಳ್ಳಿಗೆ ಕರೆಸಿಕೊಂಡಿದ್ದಾರೆ. ನಂತರ ಅಲ್ಲಿಂದ ಅಪಹರಿಸಿ ಚಿಕ್ಕಬಳ್ಳಾಪುರ ತಾಲೂಕಿನ ನಂದಿಗಿರಿಧಾಮದ ಬಳಿಯ ರೆಸಾರ್ಟ್‌ನಲ್ಲಿ ಕೂಡಿಹಾಕಿ ಜೂ. 18ರ ವರೆಗೂ ಮೂರು ದಿನಗಳ ಕಾಲ ಚಿತ್ರ ಹಿಂಸೆ ನೀಡಿದ್ದಾರೆ.

ನಂತರ 2 ಲ್ಯಾಪ್‌ಟಾಪ್, 3 ಮೊಬೈಲ್, 12 ಗ್ರಾಂ ಚಿನ್ನದ ಸರ ಕಸಿದು ಕೊನೆಗೆ 21 ಲಕ್ಷ ರೂ. ಹಣ ವರ್ಗಾಯಿಸಿಕೊಂಡು ಪರಾರಿಯಾಗಿದ್ದರು. ಈ ಸಂಬಂಧ ವಿಜಯಸಿಂಗ್ ಪ್ರಿಯತಮೆ ಸೇರಿ 6 ಮಂದಿ ವಿರುದ್ಧ ಚಿಕ್ಕಬಳ್ಳಾಪುರದ ನಂದಿಗಿರಿಧಾಮ ಠಾಣೆಯಲ್ಲಿ ದೂರು ದಾಖಲಾಗಿತ್ತು. ಪ್ರಕರಣದ ಬೆನ್ನು ಬಹತ್ತಿದ ಪೊಲೀಸರಿಗೆ ಭಾವನಾ ರೆಡ್ಡಿ, ಪುಲ್ಲಾರೆಡ್ಡಿ ಅಡಗಿರುವ ತಾಣ ತಿಳಿದಿದ್ದು, ಈ ಇಬ್ಬರು ಹುಬ್ಬಳ್ಳಿಯ ಖಾಸಗಿ ಹೋಟೆಲ್‌ವೊಂದರಲ್ಲಿರುವುದು ಗೊತ್ತಾಗಿದೆ. ಪೊಲೀಸರು ಹುಬ್ಬಳ್ಳಿಗೆ ತೆರಳಿ ಆರೋಪಿಗಳನ್ನು ಬಂಧಿಸಿ ಕರೆತಂದಿದ್ದಾರೆ. ಇನ್ನುಳಿದ ಸುಬ್ರಮಣಿ, ನಾಗೇಶ್ ರೆಡ್ಡಿ, ಸಿದ್ದೇಶ, ಸುಧೀರ್‌ಗಾಗಿ ಹುಡುಕಾಟ ನಡೆಸಿದ್ದಾರೆ.

ಆಹಾರ ಇಳುವರಿ ಕಡಿಮೆ ದರ ಹೆಚ್ಚಳಕ್ಕೆ ಕಾರಣ

ಕೌಲಂಲಾಮ್ ಪುರ, ಹವಾಮಾನ ಬದಲಾವಣೆಯಿಂದಾಗಿ ಇಳುವರಿ ಕಡಿಮೆಯಾಗಿ ಆಹಾರ ಪದಾರ್ಥಗಳ ಬೆಲೆಯಲ್ಲಿ ಹೆಚ್ಚಳಕ್ಕೆ ಕಾರಣವಾಗಬಹುದು ಎಂದು ಮಲೇಷ್ಯಾದ ನೈಸರ್ಗಿಕ ಸಂಪನ್ಮೂಲಗಳು, ಪರಿಸರ ಮತ್ತು ಹವಾಮಾನ ಬದಲಾವಣೆ ಸಚಿವ ನಿಕ್ ನಜ್ಮಿ ನಿಕ್ ಅಹ್ಮದ್ ತಿಳಿಸಿದ್ದಾರೆ

ಬಿಸಿ ಗಾಳಿಯ ವಾತಾರಣದಲ್ಲಿ ಕೃಷಿ ಮಾಡುವುದು ಕಷ್ಟವಾಗಲಿದೆ. ಇದರಿಂದ ಇಳುವರಿ ಕಡಿಮೆಯಾಗಿ ಆಹಾರ ಪದಾರ್ಥಗಳ ಬೆಲೆ ಏರಿಕೆಯಾಗಬಹುದು ಎಂದು ಅವರು ಮುನ್ಸೂಚನೆ ನೀಡಿದ್ದಾರೆ.

ದೇಶದ ಅನೇಕ ಭಾಗಗಳಲ್ಲಿ ಬಿಸಿ ಗಾಳಿಯ ಪರಿಸ್ಥಿತಿಗಳಲ್ಲಿ ಕೆಲಸ ಮಾಡುವ ಸಂಭವನೀಯ ಅಪಾಯಗಳು ಇಳುವಳಿ ಕಡಿಮೆ ಮಾಡಲಿದೆ ಎಂದು ತಿಳಿಸಿದ್ದಾರೆ.

ಬಿಸಿ ಗಾಳಿಯ ವಾತಾವರಣದಿಂದ ತರಕಾರಿ ಸೇರಿದಂತೆ ಯಾವುದೇ ಆಹಾರ ಪದಾರ್ಥಗಳ ಸರಿಯಾಗಿ ಇಳುವರಿ ಬರುತ್ತಿಲ್ಲ ಇದರಿಂದ ರೈತರು ಕೂಡ ಕಂಗಾಲಾಗಿದ್ದಾರೆ ಹೀಗಾಗಿ ಸಹಜವಾಗಿ ಆಹಾರ ಪದಾರ್ಥಗಳ ಬೆಲೆ ಏರಿಕೆಯಾಗುವ ಸಾಧ್ಯತೆಗಳು ಇವೆ ಎಂದು ಅವರು ಹೇಳಿದ್ದಾರೆ.

ಜೊತೆಗೆ ವಿವಿಧ ಬೆಳೆಗಳಲ್ಲಿ ರೋಗಲಕ್ಷಣ ಕಂಡು ಬರುತ್ತಿರುವ ಹಿನ್ನೆಲೆಯಲ್ಲಿಯೂ ಕೂಡ ಇಳುವರಿಯ ಮೇಲೆ ಪ್ರಭಾವ ಬೀರಿದೆ ಎಂದು ತಿಳಿಸಿದ್ದಾರೆ.

ರೈತರು ತಮ್ಮ ಹೊಲಗಳಲ್ಲಿ ಕೆಲಸ ಮಾಡುವ ಸಮಯದಲ್ಲಿ ಬಿಸಿ ಗಾಳಿಯಿಂದ ಜ್ವರ, ಸ್ನಾಯು ನೋವು, ವಾಕರಿಕೆ ಮತ್ತು ನನಗೆ ಗ್ಯಾಸ್ಟ್ರಿಕ್ ನೋವು ಅನೇಕ ಆರೋಗ್ಯ ಸಮಸ್ಯೆಯನ್ನು ಎದುರಿಸುತ್ತಿದ್ದಾರೆ

ಬಕ್ರೀದ್ ಹಬ್ಬದ ಹಿನ್ನೆಲೆ ನಗರದ ಚಾಮರಾಜಪೇಟೆಯ ಈದ್ಗಾ ಮೈದಾನಕ್ಕೆ ಕುರಿಗಳು ಬಂದಿದ್ದು, ಖರೀದಿಯಲ್ಲಿ ತೊಡಗಿರುವ ಮುಸ್ಲೀಮರು.

10 ಕೋಟಿ ಮೌಲ್ಯದ ಗಾಂಜಾ ಜಪ್ತಿ

ಬೀದರ್, ಕಾರಿನಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 1.18 ಕೋಟಿ ಮೌಲ್ಯದ 118 ಕೆ.ಜಿ. ಗಾಂಜಾ ಹುಮನಾಬಾದ್ ಠಾಣೆ ಪೊಲೀಸರು ರಾಷ್ಟ್ರೀಯ ಹೆದ್ದಾರಿ 65ರಲ್ಲಿ ಶನಿವಾರ ವಶಪಡಿಸಿಕೊಂಡಿದ್ದಾರೆ.

ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದಿರುವ ಪೊಲೀಸರು ಅವರ ಬಳಿಯಿದ್ದ 5 ಲಕ್ಷ ಮೌಲ್ಯದ ಒಂದು ಸ್ವಿಫ್

ಸರಸ್ವತಿಗೆ ಕರುನಾಡ ಚೇತನ ರಾಜ್ಯ ಪ್ರಶಸ್ತಿ

ದಾವಣಗೆರೆ : ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ತಿನ ಅಕ್ಕಮಹಾದೇವಿ ಸಭಾಂಗಣದಲ್ಲಿ ಚೇತನ ಫೌಂಡೇಷನ್ ಮತ್ತು ಸಂಚಲನ ಸುದ್ದಿವಾಹಿನಿ ಇವರ ಸಹಯೋಗದಲ್ಲಿ ಜರುಗಿದ ನುಡಿ ಸಡಗರ ಕಾರ್ಯಕ್ರಮದಲ್ಲಿ ಸರಸ್ವತಿ ಕೆ ನಾಗರಾಜ್ ರವರಿಗೆ ನಾಡಿನ ಅನೇಕ ಹಿರಿಯ ಸಾಹಿತಿ ಇಗಳ ಸಮ್ಮುಖದಲ್ಲಿ ಗೌರವ ಪೂರ್ವಕವಾಗಿ ಕರುನಾಡ ಚೇತನ ರಾಜ್ಯಪ್ರಶಸ್ತಿಯನ್ನು ಪ್ರದಾನ ಮಾಡಲಾಗಿದೆ.ಸರಸ್ವತಿ ಕೆ ನಾಗರಾಜ್ ಅವರು ಸಾಹಿತ್ಯ ಸೇವೆ ಕನ್ನಡಪರವಾದ ಮತ್ತು ಸಮಾಜಮುಖಿಯಾದ ಚಿಂತನೆಯನ್ನು ಹೊಂದಿ ಸಾಹಿತ್ಯ ಕ್ಷೇತ್ರದಲ್ಲಿ ಅವಿರತ ಸೇವೆಯನ್ನು ಸಲ್ಲಿಸುತ್ತಾ ಬಂದಿರುತ್ತಾರೆ.ಈ ಸ್ತುತ್ಯಾರ್ಹವಾದ ಸೇವೆ ಹೀಗೆ ಸದಾ ಮುಂದುವರೆಯಲಿ ಮತ್ತು ಜಗದ್ವಿಖ್ಯಾತಿಗಳಿಸಲಿ ಎಂದು ಚೇತನ ಫೌಂಡೇಷನ್ ಅಧ್ಯಕ್ಷರಾದ ಚಂದ್ರಶೇಖರ್ ಮಾಡಲಾಗಿರಿರವರು ಪತ್ರಿಕೆ ಪ್ರಕಟಣೆಯಲ್ಲಿ ಸರಸ್ವತಿ ಕೆ ನಾಗರಾಜ್ ರವರಿಗೆ ಅಭಿನಂದ ನೆಗಳನ್ನು ತಿಳಿಸಿದ್ದಾರೆ.

ನರೇಂದ್ರ ಮೋದಿ ಸೋಲಲ್ಲ, ರಾಹುಲ್ ಗಾಂಧಿ ಮದುವೆ ಆಗಲ್ಲ: ಮಾಜಿ ಸಿಎಂ

ಬೆಳಗಾವಿ: ಪಾಟ್ನಾದಲ್ಲಿ ತೃತೀಯ ರಂಗದ ನಾಯಕರು ಸಭೆ ಮಾಡಿದ್ದಾರೆ. ಅಲ್ಲಿ ದೇಶದ ಉದ್ಧಾರದ ಬಗ್ಗೆ ಚರ್ಚೆ ಆಗಿಲ್ಲ, ನರೇಂದ್ರ ಮೋದಿ ಅವರನ್ನು ಹೇಗೆ ಸೋಲಿಸಬೇಕು. ರಾಹುಲ್ ಗಾಂಧಿಗೆ ಮದುವೆ ಮಾಡುವ ಬಗ್ಗೆ ಚರ್ಚೆ ಮಾಡಿದ್ದಾರೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ವ್ಯಂಗ್ಯವಾಡಿದ್ದಾರೆ.ಬೆಳಗಾವಿಯ ಗಾಂಧಿ ಭವನದಲ್ಲಿ ಜಿಲ್ಲಾ ಮಟ್ಟದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ನರೇಂದ್ರ ಮೋದಿ ಅವರು ಸೋಲಲ್ಲ. ರಾಹುಲ್ ಗಾಂಧಿಗೆ ಮದುವೆ ಆಗೋದಿಲ್ಲ. ಮೋದಿಗೆ ಪರ್ಯಾಯವಾಗಿ ಒಬ್ಬ ನಾಯಕನ ಸೃಷ್ಟಿ ಮಾಡಲಾಗದಿರುವ ನಿಮ್ಮನ್ನು ಜನ ಹೇಗೆ ಆಯ್ಕೆ ಮಾಡುತ್ತಾರೆ. ನರೇಂದ್ರ ಮೋದಿ ಅವರಿಗೆ ಇಡೀ ದೇಶದಲ್ಲಿ ಎದುರಿಗೆ ನಿಲ್ಲುವಂತ ಒಬ್ಬನೇ ಒಬ್ಬ ನಾಯಕ ಯಾವುದೇ ವಿರೋಧ ಪಕ್ಷದಲ್ಲಿಲ್ಲ. ಮೋದಿ ನಾಯಕತ್ವ ಇಡೀ ದೇಶ ಒಪ್ಪಿಕೊಂಡಿದೆ. ಹೀಗಾಗಿ ಲೋಕಸಭೆಯಲ್ಲಿ ಕಾಂಗ್ರೆಸ್? ಗೆಲ್ಲಲು ಸಾಧ್ಯವಿಲ್ಲ. 25 ಸ್ಥಾನ ಮತ್ತೆ ರಾಜ್ಯದಲ್ಲಿ ನಾವು ಗೆದ್ದೇ ಗೆಲ್ಲುತ್ತೇವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.ರಾಮಕೃಷ್ಣ ಹೆಗಡೆ ಅವರು ಲೋಕಸಭೆ ಚುನಾವಣೆಯಲ್ಲಿ ಸೋತ ನಂತರ ಅವರು ಸರ್ಕಾರವನ್ನು ವಿಸರ್ಜಿಸಿದ್ದರು. ನಂತರ ನಡೆದ ಚುನಾವಣೆಯಲ್ಲಿ ಮತ್ತೆ ಬಹುಮತದಿಂದ ಹೆಗಡೆ ಸರ್ಕಾರ ಅಧಿಕಾರಕ್ಕೆ ಬಂದಿತು. ಅದೇ ರೀತಿ 2013ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿತ್ತು. ಆದರೂ ನಾವು 18 ಸ್ಥಾನ ಗೆದ್ದಿದ್ದೆವು. ಇದಾದ ಬಳಿಕ 2019ರಲ್ಲಿ ಸಮ್ಮಿಶ್ರ ಸರ್ಕಾರ ಅಧಿಕಾರದಲ್ಲಿದ್ದರೂ 28ರಲ್ಲಿ 25 ಸ್ಥಾನಗಳನ್ನು ಗೆದ್ದಿದ್ದೆವು. ಹೀಗಾಗಿ ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಗಳ ವಿಚಾರಗಳು ಬೇರೆ ಬೇರೆಯಾಗಿರುತ್ತವೆ. ಆದ್ದರಿಂದ ಎಲ್ಲರೂ ಸಂಕಲ್ಪ ಮಾಡಬೇಕು, 28ಕ್ಕೆ 28 ಸ್ಥಾನ ಗೆಲ್ಲಬೇಕು. ಬೆಳಗಾವಿ ಲೋಕಸಭೆಯಲ್ಲಿ 2 ಲಕ್ಷಕ್ಕೂ ಅಧಿಕ ಮತಗಳ ಅಂತರದಿಂದ ಗೆಲ್ಲಿಸಲು ತಾವೆಲ್ಲಾ ಪಣ ತೊಡಬೇಕು ಎಂದು ಕಾರ್ಯಕರ್ತರಿಗೆ ಬೊಮ್ಮಾಯಿ ಸಲಹೆ ನೀಡಿದರು.

ಶಾಂತಿ ಸೌಹಾರ್ದತೆಯಿಂದ ಬಕ್ರೀದ್ ಆಚರಿಸಿ:ಡಿ ವೈ ಎಸ್.ಪಿ ಚೈತ್ರ

ಹಿರಿಯೂರು:ಶಾಂತಿ ಸೌಹಾರ್ದತೆಯಿಂದ ಬಕ್ರೀದ್ ಹಬ್ಬವನ್ನು ಆಚರಿಸುವಂತೆ ಡಿವೈಎಸ್ಪಿ ಪಿ ಚೈತ್ರ ಹೇಳಿದರು. ಇಲ್ಲಿನ ಗ್ರಾಮಾಂತರ ಪೊಲೀಸ್ ಠಾಣೆಯ ಆವರಣದಲ್ಲಿ ಕರೆದಿದ್ದ ಬಕ್ರೀದ್ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಧಾರ್ಮಿಕ ಕಾರ್ಯಕ್ರಮಗಳನ್ನು ಸಂತಸ ಮತ್ತು ಸಾಮರಸ್ಯದಿಂದ ಆಚರಿಸಬೇಕು ಎಂದರು.

ಇನ್ಸ್ ಪೆಕ್ಟರ್ ಕಾಳಿಕೃಷ್ಣ ಮಾತನಾಡಿ ಮೆರವಣಿಗೆ ಪ್ರಾರ್ಥನೆ ಶಾಂತಿ ಸೌಹಾರ್ದತೆಯಿಂದ ನಡೆಸಬೇಕು ಅನಾವ ಶ್ಯಕ ಘಟನೆಗಳಿಗೆ ಎಡೆ ಮಾಡಿಕೊಡುವುದು ಬೇಡ ಎಂದು ಹೇಳಿದರು. ಸಭೆಯಲ್ಲಿ ಮುಖಂಡರಾದ ಕೇಶವಮೂರ್ತಿ, ಜಿಎಲ್. ಮೂರ್ತಿ ಮತ್ತಿತರರು ಮಾತನಾಡಿದರು.

ಪಿಎಐ ರವರಾದ ಮಂಜು ನಾಥ್, ಲಕ್ಷ್ಮೀನಾರಾಯಣ್, ನೇತ್ರಾವತಿ, ಸಚಿನ್, ಆರೋಗ್ಯ ನಿರೀಕ್ಷಕ ಅಶೋಕ್, ಮುಖಂಡರಾದ ವಿಠ್ಠಲ್ ಪಾಂಡುರಂಗ, ಜಬಿವುಲ್ಲಾ, ಶರೀಫ್, ಚಂದ್ರಪ್ಪ ಮತ್ತಿತರರು ಪಾಲ್ಗೊಂಡಿದ್ದರು.

ಹುಣಸಗಿ: ಪಟ್ಟಣದ ಜನತೆಗೆ ತಂಪೆರೆದ ಮಳೆರಾಯ ಉಳುಮೆ ಮಾಡಲು ಸಜ್ಜಾಗಿದ್ದ ರೈತರ ಮೊಗದಲ್ಲಿ ಸಂತಸ

ಹುಣಸಗಿ: ತಾಲೂಕಿನಲ್ಲಿ ಬೆಸಿಗೆ ಕಾಲ ಮುಗಿ ದು ಆಷಾಡಾ ಮಾಸ ಶುರಾವಾಗು ತ್ತಿದ್ದಂತೆ ತಾಲೂಕಿನಲ್ಲಿ ಆರಿದ್ರಾ ಮಳೆರಾಯನ ಆಗಮ ನವಾಗಿದ್ದು ಪಟ್ಟಣದ ಜನತೆ ಹಾಗೂ ರೈತಾಪಿ ವರ್ಗವು ಸ್ವಲ್ಪ ಮಟ್ಟಿಗೆ ಖುಷಿಯನ್ನು ಹಂಚಿ ಕೊಂಡು ಮಳೆರಾಯನಿಗೆ ದೊಡ್ಡ ದೊಂದು ಕೃತಜ್ಞತೆಯನ್ನು ತಿಳಿಸುವ ಮೂಲಕ ಸಂತಸ ವನ್ನು ಹಂಚಿ ಕೊಂಡರು.

ಇದೇ ರೀತಿಯಾಗಿ ತಾಲೂಕಿನಾಧ್ಯಂತ ಮಳೆಯು ಇನ್ನು ಹೆಚ್ಚು ಕಾಲ ಸುರಿದಾಗ ರೈತಾಪಿ ವರ್ಗವು ಜಮೀನಿನಲ್ಲಿ ಉಳುಮೆ ಮಾಡಲು ಅನುಕೂಲವಾಗುತ್ತದೆ ಎಂದು ರೈತರು ತಮ್ಮ ಸಂತೋಷವನ್ನು ಪತ್ರಿಕಾ ಮಾಧ್ಯಮದ ಜೊತೆ ಹಂಚಿಕೊಳ್ಳುವ ಮೂಲಕ ಜನಜಾನುವಾರುಗಳಿಗೆ ಮತ್ತು ಹಳ್ಳಕೊಳ್ಳಗಳು ತುಂಬಿಕೊಂಡಾಗ ರೈತಾಪಿ ವರ್ಗ ಸೇರಿದಂತೆ ಧನಕರುಗಳು ಕೂಡಾ ಖುಷಿಯನ್ನು ಅನುಭವಿಸುತ್ತವೆಂಬುದು ರೈತಾಪಿ ವರ್ಗದ ಸಂತಸ ವಾಗಿದೆ.ಪಟ್ಟಣದಲ್ಲಿ ಮಳೆ ಬರುವ ವೇಳೆ ಸಾರ್ವ ಜನಿಕರೊಬ್ಬರೂ ತಮ್ಮ ತಲೆಯ ಮೇಲೆ ಛತ್ರಿಯನ್ನು ಹಿಡಿದುಕೊಂಡು ಓಗುವ ದೃಶ್ಯ ಕೂಡಾ ಕಂಡು ಬಂದಿತು.

ನೀರು ಸರಬರಾಜು ಕೇಂದ್ರಕ್ಕೆ ಮೇಯರ್ ಭೇಟಿ

ದಾವಣಗೆರೆ:ಮೇಯರ್ ವಿನಾಯಕ ಬಿ ಹೆಚ್ ಅವರು ನೀರು ಸರಬರಾಜು ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೇಯರ್ ಅವರೊಂದಿಗೆ ಪಾಲಿಕೆ ಸದಸ್ಯರು, ಆಯುಕ್ತರು ಹಾಗೂ ಅಧಿಕಾರಿಗಳು ರಾಜನಹಳ್ಳಿಯ ತುಂಗಭದ್ರಾ ನದಿಯ ಬಳಿಯ ಪಾಲಿಕೆಯ ನೀರು ಸರಬರಾಜು ಜಾಕ್‌ವೆಲ್‌ಗೆ ಭೇಟಿ ನೀಡಿ ನದಿಯಲ್ಲಿ ನೀರಿನ ಮಟ್ಟವನ್ನು ಪರಿಶೀಲಿಸಿದರು. ನದಿಯ ಪಾತ್ರದಲ್ಲಿ ಮಳೆಯಾಗುತ್ತಿದ್ದು, ನದಿಯಲ್ಲಿ ನೀರಿನ ಹರಿವು ಇರುತ್ತದೆ. ಸದ್ಯಕ್ಕೆ ನದಿಯಲ್ಲಿ ನೀರಿನ ಹರಿವು ಇರುವುದರಿಂದ ನಗರಕ್ಕೆ ನೀರಿನ ಕೊರತೆ ಉಲ್ಬಣಿಸದಿರುವುದು ಕಂಡುಬಂದಿತು. ತದನಂತರದಲ್ಲಿ ಪಾಲಿಕೆಯ ಟಿ ವಿ ಸ್ಟೇಷನ್ ಕೆರೆಗೆ ಭೇಟಿ ನೀಡಿ ಕೆರೆಯಲ್ಲಿನ ನೀರಿನ ಲಭ್ಯತೆಯನ್ನು ಪರಿಶೀಲಿಸಿದರು. ಸದ್ಯ ಕೆರೆಯಲ್ಲಿ 2 ತಿಂಗಳಿಗಾಗುವಷ್ಟು ನೀರಿನ ಸಂಗ್ರಹಣೆ ಇದ್ದು ದಾವಣಗೆರೆ ನಗರಕ್ಕೆ ನೀರಿನ ಕೊರತೆ ಉಂಟಾಗದೇ ಇರುವ ರೀತಿಯಲ್ಲಿ ಸಮರ್ಪಕವಾಗಿ ನೀರು ಪೂರೈಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.ಈ ಸಂದರ್ಭದಲ್ಲಿ ಪಾಲಿಕೆ ಆಯುಕ್ತರಾದ ಶ್ರೀಮತಿ ರೇಣುಕಾ, ಪಾಲಿಕೆ ಸದಸ್ಯರಾದ ಎ ನಾಗ ರಾಜ್, ಮಂಜುನಾಥ ಗಡಿಗು ಡಾಳ್, ನಾಗರಾಜು ಹಾಗೂ ಮುಖಂಡರಾದ ಹುಲ್ಮನಿ ಗಣೇ ಶ್, ಜಗದೀಶ್, ಗುರುರಾಜ್, ಗೋಪಿ ನಾಯ್ಕ್ ನೀರು ಸರಬ ರಾಜು ವಿಭಾಗದ ಕಾಯ ರ್ಪಾ ಲಕ ಅಭಿಯಂತರ ರಾದ ಉದಯ್ ಕುಮಾರ್ ಹಾಗೂ ಇತರರು ಹಾಜರಿದ್ದರು.

ಉಚಿತ ವಿದ್ಯುತ್: ಗೃಹಜ್ಯೋತಿ ಯೋಜನೆಗೆ 11,17,208 ಗ್ರಾಹಕರು ನೋಂದಣಿ

ಬೆಂಗಳೂರು: ರಾಜ್ಯ ಸರ್ಕಾರದ ಐದು ಗ್ಯಾರಂಟಿಗಳಲ್ಲಿ ಒಂದಾದ ಗೃಹಜ್ಯೋತಿ ಯೋಜನೆ ಅಡಿ ಉಚಿತ ವಿದ್ಯುತ್ ಗೆ ನೋಂದಣಿ ಮಾಡಿಸಿಕೊಳ್ಳುವವರ ಸಂಖ್ಯೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಶನಿವಾರ ಒಂದೇ ದಿನ ಬರೋಬ್ಬರಿ 11,17,208 ಗ್ರಾಹಕರು ನೋಂದಣಿ ಮಾಡಿಕೊಂಡಿದ್ದಾರೆ.

ಸರ್ವರ್ ಸಮಸ್ಯೆ ನಡುವೆಯೂ ಗೃಹ ಜ್ಯೊ?ತಿ ಯೋಜನೆಗೆ ಕಳೆದ ಆರು ದಿನಗಳಲ್ಲಿ ಒಟ್ಟು 45.61 ಲಕ್ಷ ಗ್ರಾಹಕರು ನೋಂದಣಿ ಮಾಡಿಕೊಂಡಿದ್ದಾರೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದ್ದು, ಗೃಹ ಜ್ಯೋತಿ ನೋಂದಣಿಯು ಇನ್ನಷ್ಟು ವೇಗ ಪಡೆದುಕೊಂಡಿದ್ದು, ಶನಿವಾರ ಸಂಜೆ 8 ಗಂಟೆವರೆಗೆ 45,61,662 ಗ್ರಾಹಕರು ನೋಂದಣಿ ಮಾಡಿಕೊಂಡಿದ್ದಾರೆ ಎಂದು ವಿದ್ಯುತ್ ಇಲಾಖೆ ತಿಳಿಸಿದೆ.

ಇ-ಆಡಳಿತ ಇಲಾಖೆ ಪ್ರತ್ಯೇಕ ನೋಂದಣಿ ಲಿಂಕ್ ಅನ್ನು ರಾಜ್ಯದ 2,000 ವಿದ್ಯುಚ್ಛಕ್ತಿ ಕಚೇರಿಗಳಿಗೆ ನೀಡಿದ ನಂತರ ನೋಂದಣಿ ಪ್ರಕ್ರಿಯೆ ವೇಗ ಪಡೆದುಕೊಂಡಿದ್ದು, ಶುಕ್ರವಾರ(ಜೂನ್ 23) 10,93,606 ಗ್ರಾಹಕರು ನೋಂದಣಿ ಮಾಡಿಕೊಂಡಿದ್ದರು. ಶನಿವಾರ(ಜೂನ್ 24) ಸಂಜೆ 8 ಗಂಟೆಯವರೆಗೆ 11,17,208 ಗ್ರಾಹಕರು ಯೋಜನೆಗೆ ನೋಂದಣಿ ಮಾಡಿಕೊಂಡಿದ್ದಾರೆ.

ರಾಜ್ಯದಲ್ಲಿ ತಡವಾಗಿ ಮುಂಗಾರು ಚುರುಕು: ಸಿಲಿಕಾನ್ ಸಿಟಿಯಲ್ಲಿ ಮುಂದಿನ ಮೂರು ದಿನ ಮಳೆ

ಬೆಂಗಳೂರು: ರಾಜ್ಯದಲ್ಲಿ ತಡವಾಗಿ ಮುಂಗಾರು ಚುರುಕುಗೊಂಡಿದೆ. ಇದರ ಪರಿಣಾಮವಾಗಿ ನಗರದಲ್ಲಿ ಮುಂದಿನ ಮೂರು ದಿನಗಳ ಕಾಲ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.ಭಾನುವಾರ ರಾತ್ರಿಯಾಗುತ್ತಲೇ ಮಳೆ ಆರಂಭವಾಗಿದ್ದು, ಎಂದಿನಂತೆ ದ್ವಿಚಕ್ರ ವಾಹನ ಸವಾರರ ಪರದಾಟ ಕಂಡುಬಂತು. ಅರ್ಧ ಗಂಟೆ ಕಾಲ ಗಾಳಿ ಸಹಿತ ಜಡಿ ಮಳೆಯಾಗಿದೆ. ಮನೆಗಳತ್ತ ತೆರಳಲು ಜನರು ರಸ್ತೆಯಲ್ಲಿ ನೀರು ಹಾಗೂ ಟ್ರಾಫಿಕ್ ಸಮಸ್ಯೆಗಳಿಂದ ಪರದಾಡಿದರು. ಅಲ್ಲದೇ ಕೆಲವೆಡೆ ಮಳೆ ನಿಂತ ಮೇಲೆ ತೆರಳಲು ಜನರು ಅಲ್ಲಲ್ಲಿ ಆಶ್ರಯ ಪಡೆದರು.ಟೌನ್‌ಹಾಲ್, ಶಾಂತಿನಗರ, ಶೇಷಾದ್ರಿಪುರ, ವಿಲ್ಸನ್‌ಗಾರ್ಡನ್, ಮಲ್ಲೇಶ್ವರ, ರಾಜಾಜಿನಗರ ಸೇರಿದಂತೆ ಹಲವೆಡೆ ಮಳೆಯಾಗಿದ್ದು, ವೀಕೆಂಡ್ ಮಸ್ತಿ ಮುಗಿಸಿ ಮನೆಗೆ ವಾಪಸ್? ಹೊರಟಿದ್ದ ಜನರು ಮಳೆ ಕಿರಿಕಿರಿ ಅನುಭವಿಸುವಂತಾಗಿದೆ. ಕೆಲವೆಡೆ ಇನ್ನೂ ಮೋಡ ಕವಿದ ವಾತಾವರಣ ಇದ್ದು, ಶೀತಮಯ ಗಾಳಿ ಕೂಡ ಬೀಸುತ್ತಿದೆ.28ರ ವರೆಗೆ ಭಾರಿ ಮಳೆ ಬೀಳುವ ಸಾಧ್ಯತೆ: ಮಲೆನಾಡು, ದಕ್ಷಿಣ ಒಳನಾಡು, ಉತ್ತರ ಒಳನಾಡಿಗಿಂತ ಕರಾವಳಿಯಲ್ಲಿ ಮುಂಗಾರು ಇನ್ನಷ್ಟು ಬಿರುಸುಗೊಂಡಿದೆ. ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಜೂನ್ 28ರ ವರೆಗೆ ಭಾರಿ ಮಳೆ ಬೀಳುವ ಸಾಧ್ಯತೆ ಇರುವುದರಿಂದ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ.

ಅಂತರಾಷ್ಟ್ರೀಯ ಮಾದಕ ವ್ಯಸನ ಮತ್ತು ಅನಧಿಕೃತ ಕಳ್ಳಸಾಗಣೆ ವಿರೋಧಿ ದಿನಾಚರಣೆ

ಪ್ರತಿ ವರ್ಷ ಜೂನ್ 26 ರಂದು ಅಂತರಾಷ್ಟ್ರೀಯ ಮಾದಕ ವ್ಯಸನ ಮತ್ತು ಅನಧಿಕೃತ ಕಳ್ಳಸಾಗಣೆ ವಿರೋಧಿ ದಿನಾಚರಣೆಯನ್ನು ಆಚರಿಸುತ್ತೇವೆ. ಈ ವರ್ಷದ ಘೋಷಣೆ: " ಸಾರ್ವಜನಿಕರು ಮೊದಲು: ಕಳಂಕ ಮತ್ತು ತಾರತಮ್ಯವನ್ನು ನಿಲ್ಲಿಸಿ, ತಡೆಗಟ್ಟುವಿಕೆಯನ್ನು ಪ್ರೋತ್ಸಾಹಿಸಿ" ಎಂಬ ಘೋಷ ವಾಕ್ಯದೊಂದಿಗೆ ಸಮುದಾಯದಲ್ಲಿ ಮತ್ತು ಶಾಲಾ ಕಾಲೇಜಿನ ವಿದ್ಯಾರ್ಥಿಗಳಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವತಿಯಿಂದ ದಾವಣಗೆರೆ ಜಿಲ್ಲೆಯಲ್ಲಿ ಜಾಗೃತಿಯನ್ನು ಮೂಡಿಸಲಾಗುತ್ತದೆ.

ವ್ಯಸನ: (addiction) ಎನ್ನುವುದು ಒಂದು ಸಂಕೀರ್ಣವಾದ ಸಮಸ್ಯೆ. ವ್ಯಸನವು ಜೀವ ವಿಜ್ಞಾನಕ್ಕೆ ಸಂಬಂಧಿಸಿದ ಮಿದುಳಿನ ಅಸ್ವಸ್ಥತೆ. ಇವರ ಮೇಲೆ ಮಾನಸಿಕ ಹಾಗೂ ಸಾಮಾಜಿಕ ಅಂಶಗಳ ಪ್ರಭಾವ ಇರುತ್ತದೆ.

ತಾತ್ಕಾಲಿಕ ಆನಂದ ನೀಡುವ ಮಾದಕ-ದ್ರವ್ಯಗಳ (ಮದ್ಯ, ಸಿಗರೇಟ್, ಡ್ರಗ್ ಇತ್ಯಾದಿ) ಅವಲಂಬನೆಗೆ ಒಳಗಾಗುವುದನ್ನುವ್ಯಸನ ಎನ್ನಬಹುದು. ಇದು ದೈಹಿಕ, ಮಾನಸಿಕ ಹಾಗೂ ಸಾಮಾಜಿಕ ಅಂಶಗಳ ಮೇಲೆ ಪರಿಣಾಮ ಬೀರುತ್ತದೆ.

ಮಾದಕ ವ್ಯಸನದ ಕುರಿತಾದ ಕೆಲವು ವಾಸ್ತವಾಂಶಗಳು:

ಭಾರತದಲ್ಲಿ 2 ಕೋಟಿ 90 ಲಕ್ಷಕ್ಕೂ ಹೆಚ್ಚು ಜನ ಮದ್ಯವ್ಯಸನಿಗಳಾಗಿದ್ದಾರೆ ಮತ್ತು 28 ಲಕ್ಷಕ್ಕೂ ಹೆಚ್ಚು ಜನ ಅಫೀಮು ವ್ಯಸನಿಗಳು ಹಾಗೂ 25 ಲಕ್ಷಕ್ಕೂ ಹೆಚ್ಚು ಜನ ಗಾಂಜಾ ವ್ಯಸನಿಗಳು ಆಗಿದ್ದಾರೆ. ಭಾರತದಲ್ಲಿ 13% ಪುರುಷರು ಮತ್ತು 6% ಮಹಿಳೆಯರು ನಿರಂತರವಾಗಿ ಮದ್ಯಪಾನ ಮಾಡುತ್ತಾರೆಂದು ಅಂದಾಜಿಸಲಾಗಿದೆ. ಅಧ್ಯಾಯನವೊಂದರ ಪ್ರಕಾರ 1950ರ ದಶಕದಲ್ಲಿ ಮೊದಲಬಾರಿಗೆ ಕುಡಿತ ಪ್ರಾರಂಭಿಸುವವರ ವಯಸ್ಸು 25 ವರ್ಷ ಆಗಿತ್ತು. ಈಗ ಇದು 17 ವರ್ಷಕ್ಕೆ ಬಂದಿಳಿದಿದೆ.ಮದ್ಯ ಸೇವಿಸುವ ಪ್ರತಿ ಇಬ್ಬರಲ್ಲಿ ಒಬ್ಬನು ತೀವ್ರವಾಗಿ ಈ ವ್ಯಸನಕ್ಕೆ ಬಲಿಬೀಳುವ ಸಾಧ್ಯತೆ ಇದೆ ಎಂದು ವಿಶ್ವಆರೋಗ್ಯ ಸಂಸ್ಥೆ (WHO) ಅಂದಾಜಿಸಿದೆ.ಮದ್ಯ ಸೇವಿಸುವ ವ್ಯಕ್ತಿಗಳು ಮದ್ಯ ಸೇವಿಸಿದ ವ್ಯಕ್ತಿಗಳಿಗಿಂತ ಮೂರು ಪಟ್ಟು ಹೆಚ್ಚು ಗಂಭೀರಅನಾರೋಗ್ಯಕ್ಕೊಳಗಾಗುವ ಸಾಧ್ಯತೆಯಿದೆ. ಭಾರತದ ಆಸ್ಪತ್ರೆಗಳಲ್ಲಿ ದಾಖಲಾಗುವ ಪ್ರತಿ ಐದು ರೋಗಿಗಳಲ್ಲಿ ಒಬ್ಬರು ನೇರವಾಗಿ ಮದ್ಯ ವ್ಯಸನಕ್ಕೆ ಸಂಬಂಧಿಸಿದವರಾಗಿದ್ದಾರೆ. ಮದ್ಯವ್ಯಸನ ಮಾಡುವವರು ಹಿಂಸೆಗಳಲ್ಲಿ ತೊಡಗುವ ಸಾಧ್ಯತೆ ಹೆಚ್ಚು ಅದರಲ್ಲೂ ಅವರ ಸಂಗಾತಿಗಳೊಂದಿಗೆ ಈ ಸಾಧ್ಯತೆ ಅಧಿಕ ಈ ರೀತಿಯ ಹಿಂಸೆಯು ದೈಹಿಕವಾಗಿ, ಮಾನಸಿಕವಾಗಿ, ಲೈಂಗಿಕವಾಗಿ ಅಥವಾ ಅರ್ಥಿಕವಾಗಿಯೂ ಕೂಡ ನಡೆಯಬಹುದು. ಮದ್ಯಪಾನ ವ್ಯಸನಕ್ಕೆ ದಾಸರಾದವರು ಆತ್ಮಹತ್ಯೆ ಪ್ರಯತ್ನ ಮಾಡಬಹುದು ಅಥವಾ ಅಪಾಯಕಾರಿಯಾದ ಲೈಂಗಿಕ ವರ್ತನೆ ತೋರಬಹುದು. ಅಥವಾ ಹೆಚ್.ಐ.ವಿ ಸೋಂಕು, ಕ್ಷಯ, ಅನ್ನೇನಾಳದ ಕ್ಯಾನ್ಸರ್ (food pipe cancer) ಲಿವರ್ ಸಮಸ್ಯೆ ಮತ್ತು ಕರುಳಿನ ಹುಣ್ಣುಗಳಿಗೆ ಒಳಗಾಗಬಹುದು.

ಭಾರತದಲ್ಲಿ ಮಾದಕ ದ್ರವ್ಯಗಳನ್ನು ಮೂರು ವಿಭಾಗಗಳಲ್ಲಿ ವರ್ಗೀಕರಿಸಬಹುದು.

* ಕಾನೂನು ಬದ್ಧ ಮಾದಕವಸ್ತು ಮದ್ಯ ಮತ್ತು ತಂಬಾಕು / ಸಿಗರೇಟ್
* ಅಕ್ರಮ ಮಾದಕ ವಸ್ತುಗಳು ಮತ್ತು ವಿನೋದ ಉಂಟುಮಾಡುವ ಡ್ರಗ್ಸ್

***ಮಾದಕ ದ್ರವ್ಯ ವ್ಯಸನ (ಡ್ರಗ್ ಅಡಿಕ್ಷನ್)**

ಧೂಮಪಾನ, ಗಾಂಜಾ ಮುಂತಾದವುಗಳನ್ನು ಸೇದುವುದು, ಇಂಜೆಕ್ಷನ್ ಚುಚ್ಚಿಕೊಳ್ಳುವುದು, ಜಗಿಯುವುದು ಮತ್ತು ಕುಡಿಯುವುದು. ಮುಂತಾಗಿ ಅನೇಕ ವಿಧದಲ್ಲಿ ಮಾದಕ ದ್ರವ್ಯಗಳನ್ನು ಬಳಸಲಾಗುತ್ತದೆ.

ಇದನ್ನು ಸೇವಿಸಿದರೆ ಮಾತ್ರ ಸ್ವಾಭಾವಿಕವಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತದೆ ಎಂದು ಈ ವ್ಯಸನಕ್ಕೆ ದಾಸರಾದವರು ಭಾವಿಸುತ್ತಾರೆ. ಅದರ ಹೊರತಾಗಿ ಬದುಕಲು ಸಾಧ್ಯವೇ ಇಲ್ಲ ಎಂಬಷ್ಟು ಆ ಚಟಕ್ಕೆ ಅವಲಂಭಿತರಾಗಿರುತ್ತಾರೆ.

ಮಾದಕ ವ್ಯಸನವು ಗಂಭೀರವಾದ ಭಾವನಾತ್ಮಕ, ದೈಹಿಕ ಮತ್ತು ಸಾಮಾಜಿಕ ಸಂಬಂಧಗಳ ಸಮಸ್ಯೆಗಳಿಗೆ ಕಾರಣರಾಗಬಹುದು.

ಒತ್ತಾಯಕ್ಕೋ, ಶೈಕ್ಷಣಿಕ ಅಥವಾ ಕ್ರೀಡೆಯಲ್ಲಿ ಹೆಚ್ಚಿನ ಸಾಧನೆ ಮಾಡಬೇಕೆಂಬ ಒಲವಿನಿಂದಲೋ ಅಥವಾ ಅವರಲ್